# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 425(535). |
| ಸದಸ್ಯರ ಹೆಸರು | : | ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 11-12-2020. |
| ಉತ್ತರಿಸುವ ಸಚಿವರು | : | ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ.</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಮಾನದಂಡಗಳೇನು; (ವಿವರ ನೀಡುವುದು).</td><td><u>ಅಲ್ಪಸಂಖ್ಯಾತರ ನಿರ್ದೇಶನಾಲಯ</u><br>ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಜಾರಿಗೊಳಿಸುತ್ತಿರುವ ಯೋಜನೆಗಳ ವಿವರ ಹಾಗೂ ಮಾನದಂಡಗಳ ಕುರಿತು ಮಾಹಿತಿಯನ್ನು "ಅನುಬಂಧ-1" ರಲ್ಲಿ ನೀಡಲಾಗಿದೆ.<br><br><u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ.</u><br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಯೋಜನೆಗಳು ಮತ್ತು ಮಾನದಂಡಗಳ ವಿವರವನ್ನು "ಅನುಬಂಧ-2" ರಲ್ಲಿ ನೀಡಲಾಗಿದೆ.</td></tr>
<tr><td>ಆ.</td><td>ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ವೆಚ್ಚವಾದ ಮೊತ್ತ ಎಷ್ಟು;</td><td>ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನ ಹಾಗೂ ವೆಚ್ಚ ಮಾಡಿದ ವಿವರ ಈ ಕೆಳಕಂಡಂತಿದೆ.<br><br><u>ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ</u><br>(ರೂ.ಲಕ್ಷಗಳಲ್ಲಿ)<table><tr><th>ವರ್ಷ</th><th>ಬಿಡುಗಡೆ</th><th>ಖರ್ಚು</th></tr><tr><td>2017-18</td><td>4084.34</td><td>4078.72</td></tr><tr><td>2018-19</td><td>7590.72</td><td>7281.18</td></tr><tr><td>2019-20</td><td>2236.60</td><td>2170.27</td></tr></table><u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u><br>ಮೂರು ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನ ಮತ್ತು ವೆಚ್ಚ ಮೊತ್ತದ ವಿವರವನ್ನು "ಅನುಬಂಧ-"3" ರಲ್ಲಿ ನೀಡಲಾಗಿದೆ.</td></tr>
<tr><td>ಇ.</td><td>ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ವಿವರಗಳನ್ನು ತಾಲ್ಲೂಕುವಾರು ಒದಗಿಸುವುದು; (ಸಂಪೂರ್ಣ ವಿವರ ನೀಡುವುದು.)</td><td><u>ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ</u><br>ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ತಾಲ್ಲೂಕುವಾರು ವಿವರವನ್ನು ಸಿ.ಡಿ.ಯಲ್ಲಿ ನೀಡಲಾಗಿದೆ.</td></tr>
</table>

<table>
<tr>
<td></td>
<td></td>
<td>
<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u><br>
ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಯೋಜನೆಯ ಹೆಸರು</th><th>ಫಲಾನುಭವಿಗಳ ಸಂಖ್ಯೆ</th><th>ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td>ಸ್ವಯಂ ಉದ್ಯೋಗ ಯೋಜನೆ .</td><td>159</td><td>128.15</td></tr>
<tr><td>ಅರಿವು ಸಾಲ ಯೋಜನೆ.</td><td>650</td><td>269.72</td></tr>
<tr><td>ಶ್ರಮಶಕ್ತಿ ಸಾಲ ಯೋಜನೆ.</td><td>386</td><td>136.50</td></tr>
<tr><td>ಮೈಕ್ರೊ ಸಾಲ ಯೋಜನೆ.</td><td>550</td><td>55.00</td></tr>
<tr><td>ಗಂಗಾಕಲ್ಯಾಣ ಯೋಜನೆ.</td><td>79</td><td>158.00</td></tr>
<tr><td>ಪಶುಸಂಗೋಪನೆ ಯೋಜನೆ.</td><td>112</td><td>44.80</td></tr>
<tr><td>ಅಲ್ಪಸಂಖ್ಯಾತರ ಟ್ಯಾಕ್ಸಿ ಕಲ್ಯಾಣ ಯೋಜನೆ.</td><td>20</td><td>60.00</td></tr>
<tr><td>ವೃತ್ತಿ ಪ್ರೋತ್ಸಾಹ ಯೋಜನೆ</td><td>43</td><td>43.00</td></tr>
<tr><td>ಅಲ್ಪಸಂಖ್ಯಾತರ ರೈತರ ಕಲ್ಯಾಣ ಯೋಜನೆ.</td><td>20</td><td>20.00</td></tr>
<tr><td>ಆಟೋಮೊಬೈಲ್ ಸರ್ವೀಸ್ ತರಬೇತಿ ಹಾಗೂ ಸಾಲ ಯೋಜನೆ.</td><td>03</td><td>3.75</td></tr>
<tr><td>ಒಟ್ಟು</td><td>2022</td><td>918.92</td></tr>
</table>
</td>
</tr>
<tr>
<td>ಈ.</td>
<td>ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಹಜ್ ಯಾತ್ರೆಗೆ ತೆರಳಲು ಸಹಾಯಧನ ಕೋರಿ ಸ್ವೀಕೃತವಾದ ಅರ್ಜಿಗಳೆಷ್ಟು; ಇದರಲ್ಲಿ ಎಷ್ಟು ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ; ಬಾಕಿ ಉಳಿದಿರುವ ಅರ್ಜಿದಾರರಿಗೆ ಸಹಾಯಧನ ನೀಡುವುದು ಯಾವಾಗ? (ಸಂಪೂರ್ಣ ವಿವರ ನೀಡುವುದು.)</td>
<td>
ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ ಪ್ರತಿ ವರ್ಷ ಹಜ್ ಯಾತ್ರಾರ್ಥಿಗಳು ತಮ್ಮ ಸ್ವಂತ ಖರ್ಚಿನಿಂದ ಹಜ್ ಯಾತ್ರೆಗೆ ಪ್ರಯಾಣಿಸುತ್ತಾರೆ. ಹಜ್ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ಯಾವುದೇ ಸಹಾಯಧನ ನೀಡಲಾಗುತ್ತಿಲ್ಲ.<br><br>
ಹಾಸನ ಜಿಲ್ಲೆಯಿಂದ ಕಳೆದ 3 ವರ್ಷಗಳಿಂದ ಹಜ್ ಯಾತ್ರೆಗಾಗಿ ಪ್ರಯಾಣ ಮಾಡಿರುವ ಯಾತ್ರಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಯಾತ್ರಿಕರ ಸಂಖ್ಯೆ</th></tr>
<tr><td>2017</td><td>70</td></tr>
<tr><td>2018</td><td>103</td></tr>
<tr><td>2019</td><td>117</td></tr>
</table>
</td>
</tr>
</table>

ಸಂಖ್ಯೆ: **MWD 193 LMQ 2020**

**(ಶ್ರೀಮಂತ ಬಾಳಾಸಾಹೇಬ ಪಾಟೀಲ್)**
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಅನುಬಂಧ - 1

# ಅಲ್ಪಸಂಖ್ಯಾತರ ನಿರ್ದೇಶನಾಲಯ

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:535ಕ್ಕೆ ಅನುಬಂಧ-1

### ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳ ಮಾನದಂಡಗಳ ವಿವರ

| ಕ್ರ ಸಂ | ಯೋಜನೆ/ಕಾಯಕ್ರಮ | ಅನುಷ್ಠಾನಗೊಂಡಿರುವ ಕಾರ್ಯಕ್ರಮಗಳ ವಿವರ |
|---|---|---|
| 1 | ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ | (1) ಕರ್ನಾಟಕದಲ್ಲಿ ಚರ್ಚ್‌ಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಸಹಾಯಾನುದಾನ:-<br><br>ಚರ್ಚುಗಳ ದುರಸ್ತಿ ಮತ್ತು ನವೀಕರಣಕ್ಕಾಗಿ ಅನುದಾನವನ್ನು ಚರ್ಚುಗಳ ಕಟ್ಟಡ ನಿರ್ಮಾಣದ ವರ್ಷಗಳಿಗನುಸಾರವಾಗಿ ಕೆಳಕಂಡಂತೆ ಬಿಡುಗಡೆ ಮಾಡಲಾಗುವುದು"<br><br>ಹೆರಿಟೇಜ್ ಚರ್ಚುಗಳು: 50-100 ಹಾಗೂ 100 ವರ್ಷಗಳಿಗೂ ಮೇಲ್ಪಟ್ಟು ನಿರ್ಮಾಣ ಮಾಡಲಾದ ಚರ್ಚುಗಳಿಗೆ ಹೆರಿಟೇಜ್ ಚರ್ಚುಗಳೆಂದು ಪರಿಗಣಿಸಿ, ಇದಕ್ಕೆ ರೂ.50.00 ಲಕ್ಷಗಳನ್ನು ಅಥವಾ ಅಂದಾಜು ವೆಚ್ಚದ ಶೇ.90 ಪ್ರತಿಶತ ಯಾವುದು ಕಡಿಮೆಯೋ ಆ ಮೊತ್ತ<br>25-50 ವರ್ಷಗಳಿಗೂ ಮುನ್ನ ನಿರ್ಮಾಣ ಮಾಡಲಾದ ಚರ್ಚುಗಳು: ಇದಕ್ಕೆ ರೂ.30.00 ಲಕ್ಷಗಳನ್ನು ಅಥವಾ ಅಂದಾಜು ವೆಚ್ಚದ ಶೇ.75 ರಷ್ಟು ಯಾವುದು ಕಡಿಮೆಯೋ ಆ ಮೊತ್ತ<br><br>10-25 ವರ್ಷಗಳಿಗೂ ಮುನ್ನ ನಿರ್ಮಾಣ ಮಾಡಲಾದ ಚರ್ಚುಗಳು: ಇದಕ್ಕೆ ರೂ.20.00 ಲಕ್ಷಗಳನ್ನು ಅಥವಾ ಅಂದಾಜು ವೆಚ್ಚದ ಶೇ.50 ರಷ್ಟು ಯಾವುದು ಕಡಿಮೆಯೋ ಆ ಮೊತ್ತ<br>10 ವರ್ಷಗಳ ಅವಧಿಯ ಒಳಗೆ ನಿರ್ಮಾಣ ಮಾಡಲಾದ ಚರ್ಚುಗಳು: ಇದಕ್ಕೆ ರೂ.10.00 ಲಕ್ಷಗಳನ್ನು ಅನುದಾನವಾಗಿ ಬಿಡುಗಡೆ ಮಾಡಬಹುದು.<br><br>ಅನುದಾನದ ಸಾಮಾನ್ಯ ಷರತ್ತುಗಳು:-<br><br>1.ಯಾವ ಸಂಸ್ಥೆಯ ಪರವಾಗಿ ಸಹಾಯಾನುದಾವನ್ನು ಕೋರಲಾಗಿದೆಯೋ ಅಂಥ ಪ್ರತಿಯೊಂದು ಸಂಸ್ಥೆಯು ವ್ಯವಸ್ಥಾಪಕ ಸಮಿತಿಯ ನಿಯಂತ್ರಣದಲ್ಲಿರತಕ್ಕದ್ದು ಮತ್ತು ವ್ಯವಸ್ಥಾಪಕ ಸಮಿತಿಯು ಸಂಸ್ಥೆಯ ನಿರ್ವಹಣೆಗೆ ಹಾಗೂ ಕಾಲಕಾಲಕ್ಕೆ ನಿಯಮಿಸಬಹುದಾದಂಥ ಸಹಾಯಾನುದಾನದ ಎಲ್ಲ ಷರತ್ತುಗಳನ್ನು ಯುಕ್ತವಾಗಿ ಪೂರೈಸುವ ಜವಾಬ್ದಾರಿ ಹೊಂದಿರತಕ್ಕದ್ದು.<br>(2) ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣಗೋಡೆ ನಿರ್ಮಾಣ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಹಾಯಾನುಧನ:-<br>ಕ್ರಿಶ್ಚಿಯನ್ ಸಮುದಾಯ ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಾಣ ಮತ್ತು ಈ ಸ್ಮಶಾನಗಳಿಗೆ ಮೂಲಭೂತ ಸೌಕರ್ಯಗಳಾದ ವಿದ್ಯುದೀಕರಣ, ಶುದ್ಧ ಕುಡಿಯುವ ನೀರಿನ ಹಾಗೂ ಕೊಳವೆ ಬಾವಿ ಸೌಕರ್ಯ, ಶವ ಇಡುವ ಕಟ್ಟಡ ರಸ್ತೆ, ಇತ್ಯಾದಿಗಳಿಗೆ ಅಂದಾಜು ವೆಚ್ಚದ ಶೇ 90% ರಷ್ಟು ಅಥವಾ ಗರಿಷ್ಠ ರೂ. 25.00 ಲಕ್ಷ ಯಾವುದು ಕಡಿಮೆಯೋ ಅದರಂತೆ ಕ್ರಿಶ್ಚಿಯನ್ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಲಾಗುವುದು.<br><br>ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಾಣ ಮತ್ತು ಈ ಸ್ಮಶಾನಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಸಂಬಂಧಪಟ್ಟ ಮುಖ್ಯಸ್ಥರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಮಾರ್ಗಸೂಚಿಗಳನ್ವಯ ನಿಗದಿತ ದಾಖಲಾತಿ ಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.<br><br>ಅಲ್ಪಸಂಖ್ಯಾತರಿಗೆ ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳಿಗೆ ಸಹಾಯಾನುದಾನ:-<br><br>1) ಯಾವ ಸಂಸ್ಥೆಯ ಪರವಾಗಿ ಸಹಾಯಾನುದಾನವನ್ನು ಕೋರಲಾಗಿದೆಯೋ ಅಂಥ ಪ್ರತಿಯೊಂದು ಸಂಸ್ಥೆಯು ವ್ಯವಸ್ಥಾಪಕ ಸಮಿತಿಯ ನಿಯಂತ್ರಣದಲ್ಲಿರತಕ್ಕದ್ದು ಮತ್ತು ವ್ಯವಸ್ಥಾಪಕ ಸಮಿತಿಯು ಸಂಸ್ಥೆಯ ನಿರ್ವಹಣೆ ಹಾಗೂ ಕಾಲ ಕಾಲಕ್ಕೆ ನಿಯಮಿಸಬಹುದಾದಂತೆ ಸಹಾಯಾನುದಾನದ ಎಲ್ಲ ಷರತ್ತುಗಳನ್ನು ಯುಕ್ತವಾಗಿ ಪೂರೈಸುವ ಜವಾಬ್ದಾರಿ ಹೊಂದಿತಕ್ಕದ್ದು. |

| | | |
|---|---|---|
| | | ಅನುದಾನಕ್ಕಾಗಿ ಮತ್ತು ಅದರ ಬಳಕೆಗೆ ಸಂಬಂಧಿಸಿದ ಪ್ರಕ್ರಿಯೆ ಹಾಗೂ ಇತರೆ ಷರತ್ತುಗಳು:-<br>1) ಈ ಯೋಜನೆಯನ್ನು ಅಲ್ಪಸಂಖ್ಯಾತರ ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಜಾರಿಗೆ ತರಲಾಗುವುದು. ರಾಜ್ಯ ಸರ್ಕಾರವು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮುಖಾಂತರ ಬಂದ ಅನುದಾನದ ಅರ್ಜಿಗಳನ್ನು ಮಾತ್ರ ಪರಿಗಣಿಸುವುದು.<br>2) ವೃದ್ಧಾಶ್ರಮಕ್ಕೆ ತಗಲುವ ಅನುಮೋದಿತ ಒಟ್ಟು ವೆಚ್ಚದಲ್ಲಿ ರಾಜ್ಯ ಸರ್ಕಾರದ ಪಾಲು ಶೇ. 90 ರಷ್ಟಾಗಿದ್ದು, ಉಳಿದ ಶೇ. 10ರಷ್ಟು ಅನುಮೋದಿತ ವೆಚ್ಚವನ್ನು ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯು ತನ್ನ ಸ್ವಂತ ಸಂಪನ್ಮೂಲಗಳಿಂದ ಭರಿಸತಕ್ಕದ್ದು.<br>3) ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ ಎರಡು ವರ್ಷಗಳಾಗಿರಬೇಕು.<br>4) ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಸೌಲಭ್ಯ, ಸಂಪನ್ಮೂಲ ಹಾಗೂ ಅನುಭವ ಹಾಗೂ ಆರ್ಥಿಕವಾಗಿ ಸುಸ್ಥಿತಿಯುಳ್ಳ ಆಡಳಿತ ವರ್ಗವನ್ನು ಹೊಂದಿರಬೇಕು.<br>5) ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯು ಯಾವುದೇ ಓರ್ವ ವ್ಯಕ್ತಿಯ ಅಥವಾ ಒಂದು ಜನಾಂಗದ ಲಾಭಕ್ಕಾಗಿ ನಡೆಯುತ್ತಿರಬಾರದು.<br>6) ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯು ಅಧಿಕೃತವಾಗಿ ರಚಿತವಾಗಿ ಆಡಳಿತ ಮಂಡಳಿಯನ್ನು ಹೊಂದಿದ್ದು, ಆಡಳಿತ ವರ್ಗದ ಅಧಿಕಾರ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿ ಸಂಸ್ಥೆಯ ಬರವಣಿಗೆಯಲ್ಲಿರುವ ಸಂವಿಧಾನದಲ್ಲಿ ವಿರೂಪಿತವಾಗಿರಬೇಕು.<br>7) ಅಲ್ಪಸಂಖ್ಯಾತ ಸಮುದಾಯದ ಸ್ವಯಂ ಸೇವಾ ಸಂಸ್ಥೆಯ ಸೇವೆಗಳು ಯಾವುದೇ ಜಾತಿ ಪಂಥ, ಮತ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ವರ್ಷದ ಎಲ್ಲಾ ಕಾಲದಲ್ಲಿ ಲಭ್ಯವಿರಬೇಕು |
| 2 | ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ | ಐಐಎಂ, ಐಐಟಿ, ಐಐಎಸ್‌ಸಿ ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ 2 ಲಕ್ಷ ರೂ.ಗಳ ಪ್ರೋತ್ಸಾಹಧನ:- ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIT, IIM, IISC, IITs, IIITs, NITs, IIMs, IISERs, AIIMS, NLU, INIs, INI & IuSLAs ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ರಾಜ್ಯದ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಬೌದ್ಧರು ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ ರೂ. 2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ.<br>ಷರತ್ತುಗಳು:-<br>1) ಸರ್ಕಾರದಿಂದ ಶಾಸನಬದ್ಧ ಅನುಮತಿ ಪಡೆದ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಮಾತ್ರ ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುತ್ತಾರೆ.<br>2) ಈ ಯೋಜನೆಯನ್ನು ಆನ್‌ಲೈನ್ ಪದ್ಧತಿಯಲ್ಲಿ ಅನುಷ್ಠಾನಗೊಳಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಕ್ರಮವಹಿಸತಕ್ಕದ್ದು.<br>3) ಈ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಗರಿಷ್ಠ 100 ವಿದ್ಯಾರ್ಥಿಗಳಿಗೆ ಜನಸಂಖ್ಯೆಯ ಅನುಪಾತಕ್ಕನುಗುಣವಾಗಿ ಪ್ರೋತ್ಸಾಹಧನ ನೀಡಲು ಕ್ರಮವಹಿಸತಕ್ಕದ್ದು.<br>4) ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. (ಹೊರ ರಾಜ್ಯಗಳಿಂದ ಬಂದು ಕರ್ನಾಟಕ ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಈ ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುವುದಿಲ್ಲ, ಪರಾಂತು ಕರ್ನಾಟಕದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ).<br>5) ಗಡಿನಾಡು ಭಾಗದ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೂ ಸಹ ವಿದ್ಯಾರ್ಥಿವೇತನ ನೀಡತಕ್ಕದ್ದು.<br>6) ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ. 6.00 ಲಕ್ಷಕ್ಕಿಂತ ಮೀರಿರಬಾರದು.<br>7) ಹಿಂದಿನ ವರ್ಷದ ಪರೀಕ್ಷೆಯಲ್ಲಿ ಅನುತ್ತೀರ್ಣರಾದ (ಬ್ಯಾಕ್‌ಲಾಗ್) ವಿದ್ಯಾರ್ಥಿಗಳಿಗೆ ಈ ಪ್ರೋತ್ಸಾಹಧನ ಪಡೆಯುವ ಅವಕಾಶವಿರುವುದಿಲ್ಲ.<br>8) ಮಂಜೂರಾದ ಪ್ರೋತ್ಸಾಹಧನವನ್ನು ವಿದ್ಯಾರ್ಥಿಯ ಬ್ಯಾಂಕಿನ ಖಾತೆಗೆ ನೇರವಾಗಿ ಜಮಾ ಮಾಡುವುದು.<br>**ಬಿ) ಬಿ.ಎಡ್ & ಡಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ:-**<br>National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜು, Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಹಾಗೂ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ (B.Ed) ಮತ್ತು ಡಿ.ಎಡ್ (D.Ed) ಕೋರ್ಸುಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.25,000/-ಗಳ ವಿಶೇಷ ಪ್ರೋತ್ಸಾಹಧನ ಪ್ರತಿ ವರ್ಷ ನೀಡಲು ಮಂಜೂರಾತಿ ನೀಡಿ |

ಆದೇಶಿಸಿದೆ.

ಷರತ್ತುಗಳು:-

1. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.
2. ಬಿ.ಎಡ್ (ಃ.ಇಜ) ಮತ್ತು ಡಿ.ಎಡ್ (ಆ.ಇಜ) ಕೋರ್ಸುಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ (ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು.
3. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ವರಮಾನ ಗರಿಷ್ಠ ರೂ. 6.00 ಲಕ್ಷಕ್ಕೆ ಮೀರಿರಬಾರದು.
4. ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು.
5. ಆಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅರ್ಹ ಅಭ್ಯರ್ಥಿಗಳನ್ನು ಕಂಡಿಕೆ (4)ರಲ್ಲಿ ಸೂಚಿಸಿರುವಂತೆ ಆಯ್ಕೆ ಮಾಡಿಕೊಳ್ಳತಕ್ಕದ್ದು.
6. ಪ್ರೋತ್ಸಾಹಧನ ಪಡೆಯುವ ವಿದ್ಯಾರ್ಥಿಗಳು ಭಾರತ ಸರ್ಕಾರ ಅಥವಾ ಇತರೆ ವಿದ್ಯಾರ್ಥಿವೇತನ/ಶಿಷ್ಯವೇತನ ಪಡೆಯಲು ಅರ್ಹರಿರುತ್ತಾರೆ.
7. ಈ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳು ಸರ್ಕಾರಿ/ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಯಮಾನುಸಾರ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.
8. ವಿದ್ಯಾರ್ಥಿಗಳು ಡಿ.ಎಡ್ ಮತ್ತು ಬಿ.ಎಡ್ ಕೋರ್ಸುಗಳಲ್ಲಿ ದಾಖಲಾಗಿರುವ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಎಲ್ಲಾ ಅಧಿಕೃತ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
9. National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ.
10. ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಕನಿಷ್ಠ 50% ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು. ಉತ್ತೀರ್ಣರಾಗದ ಅಭ್ಯರ್ಥಿಗಳು ಈ ಯೋಜನೆಯಡಿ ಪ್ರೋತ್ಸಾಹಧನ ಪಡೆಯಲು ಅರ್ಹ ಇರುವುದಿಲ್ಲ.
11. ಮೊದಲನೇ ವರ್ಷದಲ್ಲಿ ಪ್ರೋತ್ಸಾಹಧನ ಪಡೆದಿರುವ ಅಭ್ಯರ್ಥಿಗಳು ಎರಡನೇ ವರ್ಷದಲ್ಲಿ ಪ್ರೋತ್ಸಾಹಧನ ಪಡೆಯಲು ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.
12. ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಕನಿಷ್ಠ ಶೇಕಡ 50% ರಷ್ಟು ಬಾಲಕಿಯರಿಗೆ ಮೀಸಲಿರಿಸತಕ್ಕದ್ದು ಹಾಗೂ ಡಿ.ಎಡ್ ಕೋರ್ಸಿಗೆ ಶೇಕಡ 25 ರಷ್ಟು ಮತ್ತು ಬಿ.ಎಡ್ ಕೋರ್ಸಿನ ಅಭ್ಯರ್ಥಿಗಳಿಗೆ ಶೇಕಡ 75ರಷ್ಟು ಅನುಪಾತದಲ್ಲಿ ಉಪಯೋಗಿಸುವುದು.
13. ಸುಳ್ಳು ಮಾಹಿತಿ, ದಾಖಲಾತಿ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಧನ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೀಡಲಾದ ಪ್ರೋತ್ಸಾಹಧನ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.
14. ಈ ಯೋಜನೆಯಡಿ ಪ್ರೋತ್ಸಾಹಧನ ಪಡೆದ ವಿದ್ಯಾರ್ಥಿಗಳು ಡಿ.ಎಡ್ ಮತ್ತು ಬಿ.ಎಡ್ ಕೋರ್ಸ್ ಪೂರ್ಣಗೊಳಿಸದೇ ಮಧ್ಯದಲ್ಲಿ ಬಿಟ್ಟು ಹೋದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ವಿಚಾರಣೆ ನಡೆಸಿ ಇಲಾಖೆಯ ಮುಖ್ಯಸ್ಥರಿಗೆ ವರದಿ ಸಲ್ಲಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಪರಿಶೀಲಿಸಿ ಇಲಾಖಾ ಮುಖ್ಯಸ್ಥರು ಅಂತಿಮ ನಿರ್ಣಯ ತೆಗೆದುಕೊಳ್ಳತಕ್ಕದ್ದು. ಒಂದು ಪಕ್ಷ ಸಮಂಜಸವಾದ ಕಾರಣವಿಲ್ಲದಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.
15. ಸಂಬಂಧಪಟ್ಟ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಮಂಜೂರು ಮಾಡಿ ವಿತರಿಸುವ ಅಧಿಕಾರ ಹೊಂದಿರುತ್ತಾರೆ. ಅರ್ಹ ವಿದ್ಯಾರ್ಥಿಗಳ ಮೂಲ ದಾಖಲೆ, ಕಾಲೇಜುಗಳ ವಿವರ ಹಾಗೂ ಇತರೆ ಮಾಹಿತಿಯನ್ನು ಜಿಲ್ಲಾ ಕಛೇರಿಯಲ್ಲಿಯೇ ಕಾಪಾಡಿ ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಿರ್ವಹಿಸತಕ್ಕದ್ದು. ಸಂಬಂಧಪಟ್ಟ ದಾಖಲೆಗಳನ್ನು ರಾಜ್ಯ ಮಟ್ಟದ ಅಧಿಕಾರಿಗಳು/ಲೆಕ್ಕ ಪರಿಶೋಧನಾ ತಂಡದವರ ಬೇಡಿಕೆಯನುಸಾರ ತಪಾಸಣೆಗೆ ಸಲ್ಲಿಸತಕ್ಕದ್ದು.

**(ಇ) ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಪತ್ರಿಕೋದ್ಯಮ ಮತ್ತು ಸಂವಹನ ತರಬೇತಿ (Print and Electro Media):-**

ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಪತ್ರಿಕೋದ್ಯಮ ಮತ್ತು ಸಂವಹನ ತರಬೇತಿ (Print and Electronic Media) ನೀಡಲು ಪ್ರತಿ ಅಭ್ಯರ್ಥಿಗೆ 03 ತಿಂಗಳ ಅವಧಿ ತರಬೇತಿಗೆ ರೂ. 30,000/-, 6 ತಿಂಗಳ ಅವಧಿ ತರಬೇತಿಗೆ ರೂ. 60,000/- ಗಳು 1 ವರ್ಷದ ಅವಧಿಯ ತರಬೇತಿಗೆ ರೂ. 1,20,000/- ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

ಷರತ್ತುಗಳು:

1) ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
2) ಅಭ್ಯರ್ಥಿಯ ವಯೋಮಿತಿಯು ಕನಿಷ್ಠ 18 ರಿಂದ ಗರಿಷ್ಠ 40 ವರ್ಷಗಳಾಗಿರಬೇಕು.
3) ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.6.00 ಲಕ್ಷಕ್ಕಿಂತ ಮೀರಿರಬಾರದು.
4) ಅಭ್ಯರ್ಥಿಯು ಪದವಿಧರರನ್ನಾಗಿರತಕ್ಕದ್ದು.
5) ಪತ್ರಿಕೋದ್ಯಮ ತರಬೇತಿಯನ್ನು ಸರ್ಕಾರಿ/ಅರೆ ಸರ್ಕಾರಿ/ಪ್ರತಿಷ್ಠಿತ ಖಾಸಗಿ ಸಂಸ್ಥೆಗಳ ಮೂಲಕ ಪಡೆಯುತ್ತಿರಬೇಕು.
6) ಪತ್ರಿಕೋದ್ಯಮ ವಿಷಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಪ್ರೋತ್ಸಾಹಧನಕ್ಕೆ ಅರ್ಹರಾಗಿರುತ್ತಾರೆ. ಜೊತೆಗೆ ಕೇಂದ್ರ /ರಾಜ್ಯ ಸರ್ಕಾರದಿಂದ ನೀಡುವ ಇತರೆ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
7) ಪ್ರತಿ ತಿಂಗಳು ತರಬೇತಿ ಸಂಸ್ಥೆಯ ಹಾಜರಾತಿ ತಃಖ್ತೆ ಮತ್ತು ಅಭ್ಯರ್ಥಿಯ ಪ್ರಗತಿ ವರದಿಯನ್ನು ಪಡೆದು ಪ್ರೋತ್ಸಾಹಧನ ನೀಡುವುದು. ಹಾಜರಾತಿ ಶೇಕಡ 80% ರಷ್ಟು ಇರತಕ್ಕದ್ದು.
8) ಪ್ರತಿ ಅಭ್ಯರ್ಥಿಯ ಪ್ರೋತ್ಸಾಹಧನವನ್ನು ಎನ್.ಇ.ಎಫ್.ಟಿ ಮೂಲಕ ಅವರವರ ಬ್ಯಾಂಕ್ ಖಾತೆಗೆ ಜಮಾ ಮಾಡತಕ್ಕದ್ದು.
9) ತರಬೇತಿ ಪ್ರಾರಂಭವಾದ ನಂತರ ಪ್ರತಿ ಅಭ್ಯರ್ಥಿಗೆ ಒಂದು ಲ್ಯಾಪ್‌ಟಾಪ್ ಮತ್ತು ಕ್ಯಾಮರ ಒದಗಿಸತಕ್ಕದ್ದು.
10) ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಸದರಿ ತರಬೇತಿಯ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ.
11) ಈ ಯೋಜನೆಯ ಪ್ರಚಾರ ಕಾರ್ಯವನ್ನು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಕೈಗೊಳ್ಳತಕ್ಕದ್ದು.
12) ಅರ್ಜಿಗಳನ್ನು ಆನ್‌ಲೈನ್ (Online) ಮೂಲಕ ಆಹ್ವಾನಿಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಬೆಂಗಳೂರು ರವರು ಕ್ರಮವಹಿಸತಕ್ಕದ್ದು.

(ಊ) ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಜಿ.ಎನ್.ಎಂ. ಮತ್ತು ಬಿ.ಎಸ್ಸಿ. ನರ್ಸಿಂಗ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನುದಾನ:-

ಅಲ್ಪಸಂಖ್ಯಾತರ ವರ್ಗದ ಅಭ್ಯರ್ಥಿಗಳು ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಅಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಬೌದ್ಧ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ. 35,000/-ಗಳ ಅನುದಾನವನ್ನು ಪ್ರತಿ ವರ್ಷ (ಕೋರ್ಸ್ ಮುಗಿಯವ ವರೆಗೆ) ನೀಡಲು ಆದೇಶಿಸಲಾಗಿದೆ.

ಷರತ್ತುಗಳು:-

1. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.
2. ಸದರಿ ಕೋರ್ಸ್‌ಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ ಅನುದಾನವನ್ನು ನೀಡಲಾಗುವುದು.
3. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಗರಿಷ್ಠ ವರಮಾನ ರೂ. 2.50 ಲಕ್ಷ.
4. ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು.
5. ಅಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅಭ್ಯರ್ಥಿಗಳ ಸಂಖ್ಯೆ ನಿಗದಿಪಡಿಸಿಕೊಳ್ಳತಕ್ಕದ್ದು.
6. ಸದರಿ ವಿದ್ಯಾರ್ಥಿಗಳು ಭಾರತ ಸರ್ಕಾರದ ವಿದ್ಯಾರ್ಥಿವೇತನ ಪಡೆಯಬಹುದು.
7. ಸದರಿ ವಿದ್ಯಾರ್ಥಿಗಳು ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು.
8. ವಿದ್ಯಾರ್ಥಿಗಳು ನರ್ಸಿಂಗ್ ತರಬೇತಿ ಪಡೆಯುತ್ತಿರುವ ಬಗ್ಗೆ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಅಧಿಕೃತ ಎಲ್ಲಾ ದಾಖಲಾತಿಗಳನ್ನು ಪಡೆಯತಕ್ಕದ್ದು.
9. ಅ) ಇಂಡಿಯನ್ ನರ್ಸಿಂಗ್ ಕೌನ್ಸಿಲ್ (ಐ.ಎನ್.ಸಿ) ಮಾನ್ಯತೆ ಪಡೆದ ಶಾಲೆ/ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.
10. ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಲೂ ಪ್ರವೇಶ ಪಡೆದ ನಂತರದ ವರ್ಷಗಳಲ್ಲಿ 40% ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ ಅರ್ಹರಿರುತ್ತಾರೆ.
11. ಮೊದಲನೇ ವರ್ಷ ಆಯ್ಕೆಯಾದ ಅಭ್ಯರ್ಥಿಗಳು ನಂತರದ ವರ್ಷಗಳಲ್ಲಿ ಪ್ರತಿ ವರ್ಷ ಅರ್ಜಿ ಸಲ್ಲಿಸತಕ್ಕದ್ದು.
12. ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ಶೇಕಡ 75:25 ಅನುಪಾತನದಲ್ಲಿ ಜಿ.ಎನ್.ಎಂ ಮತ್ತು ಬಿಎಸ್ಸಿ ನರ್ಸಿಂಗ್ ಅಭ್ಯರ್ಥಿಗಳಿಗೆ ಉಪಯೋಗಿಸುವುದು. ಒಂದು ಪಕ್ಷ ಯಾವುದೇ ಕೋರ್ಸ್‌ಗೆ ಸಾಕಷ್ಟು ಅರ್ಜಿಗಳು ಬಾರದಿದ್ದಲ್ಲಿ ಅದಲು ಬದಲು ಮಾಡಿಕೊಳ್ಳಬಹುದು.
13. ಅಭ್ಯರ್ಥಿಗಳು ಆಯಾ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಕನಿಷ್ಠ 40% ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಉತ್ತೀರ್ಣರಾಗದ ಅಭ್ಯರ್ಥಿಗಳು ತರಬೇತಿ ಭತ್ಯೆ ಪಡೆಯಲು ಅರ್ಹರಾಗಿರುವುದಿಲ್ಲ.
14. ಸುಳ್ಳು ಮಾಹಿತಿ/ಜಾತಿ ಪ್ರಮಾಣ ಪತ್ರ ನೀಡಿ ಪ್ರವೇಶ /ತರಬೇತಿ ಭತ್ಯೆ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳ ತರಬೇತಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.
15. ಯಾವುದೇ ಅಭ್ಯರ್ಥಿ ನರ್ಸಿಂಗ್ ತರಬೇತಿ ಪೂರ್ಣಗೊಳಿಸದೇ ಮಧ್ಯದಲ್ಲಿ ಬಿಟ್ಟು ಹೋದಲಿ ಜಿಲ್ಲಾ ಮಟ್ಟದ

| | | |
|---|---|---|
| | | ಅಧಿಕಾರಿಗಳು ವಿಚಾರಣೆ ನಡೆಸಿ ಇಲಾಖೆಯ ಮುಖ್ಯಸ್ಥರಿಗೆ ವರದಿ ಸಲ್ಲಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಪರಿಶೀಲಿಸಿ ಇಲಾಖಾ ಮುಖ್ಯಸ್ಥರು ಅಂತಿಮ ನಿರ್ಣಯ ತೆಗೆದುಕೊಳ್ಳುವುದು. ಒಂದು ಪಕ್ಷ ಸಮಂಜಸವಾದ ಕಾರಣವಿಲ್ಲದಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.<br>16. ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಮಂಜೂರು ಮಾಡಿ ವಿತರಿಸುವ ಅಧಿಕಾರ ಹೊಂದಿರುತ್ತಾರೆ. ಈ ರೀತಿ ನಿಯೋಜಿಸುವ ಅಭ್ಯರ್ಥಿಗಳ ಮೂಲ ಅರ್ಜಿಗಳಲ್ಲದೆ ಶಾಲಾ ಕಾಲೇಜುಗಳ ವಿವರ ಹಾಗೂ ಇತರ ಮಾಹಿತಿಯನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಿರ್ವಹಿಸತಕ್ಕದ್ದು. ಈ ರಿಜಿಸ್ಟರ್‌ನ್ನು ರಾಜ್ಯ ಮಟ್ಟದ ಅಧಿಕಾರಿಗಳು ಅವರ ತಪಾಸಣೆ ವೇಳೆಯಲ್ಲಿ ಪರಿಶೀಲಿಸತಕ್ಕದ್ದು.<br>(ಋ) ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ.<br>ಎಸ್.ಎಸ್.ಎಲ್.ಸಿ ಪರೀಕ್ಷಾ ಮಂಡಳಿ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿಗಳನ್ನು ಕರೆದು ಒಟ್ಟು 1 ಸಾವಿರ ಅರ್ಹ ಅಲ್ಪಸಂಖ್ಯಾತರ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ರೂ. 10,000/- ಮತ್ತು 1 ಸಾವಿರ ಅರ್ಹ ಅಲ್ಪಸಂಖ್ಯಾತರ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ರೂ. 20,000/- ಗಳನ್ನು ಡಿ.ಬಿ.ಟಿ ಮಾದರಿಯಲ್ಲಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಪ್ರೋತ್ಸಾಹಧಣವನ್ನು ವರ್ಗಾಯಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಕ್ರಮವಹಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ. |
| 3 | ಅಲ್ಪಸಂಖ್ಯಾತರ ವಸತಿ ಶಾಲೆಗಳು | ವಸತಿ ಶಾಲೆಗಳಿಗೆ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳು:<br>(1) ಈ ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯುವ ಅಭ್ಯರ್ಥಿಗಳು ರಾಜ್ಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಈ ಸಮುದಾಯಕ್ಕೆ ಸೇರಿರಬೇಕು.<br>(2) ಈ ಶಾಲೆಯನ್ನು 6 ರಿಂದ 10 ನೇ ತರಗತಿಯವರೆಗೆ ನಡೆಸಲಾಗುವುದು. ಪ್ರತಿ ತರಗತಿಯ ವಿದ್ಯಾರ್ಥಿಗಳ ಸಂಖ್ಯೆ 50 ಆಗಿರುತ್ತದೆ. 6 ನೇ ತರಗತಿಗೆ ಸೇರ ಬಯಸುವ ಅಭ್ಯರ್ಥಿಗಳು ಸರ್ಕಾರದ ಅಥವಾ ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.<br>(3) ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಸಂಭಂದಿಸಿದ ಶಾಲೆಯ ಪ್ರಾಂಶುಪಾಲರು ಅಥವಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳನ್ನು ಸಂಪರ್ಕಿಸಬೇಕು.<br>(4) ಪ್ರವೇಶ ಪರೀಕ್ಷೆಯನ್ನು ಕನ್ನಡ ಭಾಷೆ, ಗಣಿತ, ತ್ವರಿತ ಬರವಣಿಗೆ, ಸಾಮಾನ್ಯ ಜ್ಞಾನಗಳ ಮೇಲೆ ನಡೆಸಿ ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಮೌಖಿಕ ಪರೀಕ್ಷೆಗಳ ಮೂಲಕ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ಕೊಡಬೇಕು.<br>(5) ಈ ಶಾಲೆಗಳು ಸರ್ಕಾರಿ ಶಾಲೆಗಳಾಗಿದ್ದು ಈ ಶಾಲೆಗಳಲ್ಲಿ ಭೋದಿಸುವ ಮಾಧ್ಯಮವು ಕನ್ನಡ/ಆಂಗ್ಲ ಆಗಿರುತ್ತದೆ. ಶಿಕ್ಷಣ ಇಲಾಖೆಯು ಕಾಲಕಾಲಕ್ಕೆ ನಮೂದಿಸಿರುವ ಪಠ್ಯ ಕ್ರಮದಂತೆಯೇ ಈ ವಸತಿ ಶಾಲೆಗಳಲ್ಲಿಯೂ ಸಿಲೆಬಸ್ ಇರುತ್ತದೆ.<br>(6) ಈ ವಸತಿ ಶಾಲೆಗಳಿಗೆ ಪ್ರವೇಶ ನೀಡುವ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯವು ರೂ. 1.00 ಲಕ್ಷಕ್ಕೆ ಮೀರಿರಬಾರದು. ಶೇ.75 ರಷ್ಟು ಸ್ಥಾನಗಳನ್ನು (ಮುಸ್ಲಿಂ-77%, ಕ್ರಿಶ್ಚಿಯನ್-14%, ಜೈನ್-6% ಸಿಖ್-1%, ಬೌದ್ಧ-2%) ಅಲ್ಪಸಂಖ್ಯಾತರಿಗೆ ನೀಡಬೇಕು. ಅಲ್ಪಸಂಖ್ಯಾತರ ಸಮುದಾಯ ನಿರ್ದಿಷ್ಟ ಸಮುದಾಯದ ಅಭ್ಯರ್ಥಿಗಳು ದೊರೆಯದಿದ್ದಲ್ಲಿ ಲಭ್ಯವಿರುವ ಇತರೆ ಅಲ್ಪಸಂಖ್ಯಾತರ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ನೀಡಬಹುದು. ಶೇ.25 ರಷ್ಟು ಸ್ಥಾನಗಳನ್ನು ಹಿಂದುಳಿದ ವರ್ಗಗಳ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ಅಭ್ಯರ್ಥಿಗಳಿಗೆ ನೀಡತಕ್ಕದ್ದು.<br>(7) ಈ ವಸತಿ ಶಾಲೆ ಇರುವ ಕಂದಾಯ ವಿಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ನೀಡುವುದು ಉಳಿದಲ್ಲಿ ಇತರೆ ವಿಭಾಗದ ವಿದ್ಯಾರ್ಥಿಗಳಿಗೆ ಅವಕಾಶ ನೀಡುವುದು.<br>(8) ಈ ವಸತಿ ಶಾಲೆಗಳಲ್ಲಿ ಅಭ್ಯರ್ಥಿಗಳು ಅನುತ್ತೀರ್ಣರಾದಲ್ಲಿ ಒಂದು ಶೈಕ್ಷಣಿಕ ಅವಧಿಗೆ ಮಾತ್ರ ಮುಂದುವರೆಸಬಹುದು.<br>(9) ಈ ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯುವ ಅಭ್ಯರ್ಥಿಯು ಮೆರಿಟ್ ವಿದ್ಯಾರ್ಥಿವೇತನ ಹೊರತುಪಡಿಸಿ ಬೇರೆ ಯಾವುದೇ ವಿದ್ಯಾರ್ಥಿವೇತನವನ್ನು ಪಡೆಯಲು ಅರ್ಹವಿರುವುದಿಲ್ಲ.<br>(10) ಸಾಧ್ಯವಾದಷ್ಟು ಶೇ. 80% ರಷ್ಟು ಸ್ಥಾನಗಳನ್ನು ಗ್ರಾಮೀಣ ಅಭ್ಯರ್ಥಿಗಳಿಗೆ ನೀಡಬೇಕು.<br>(11) ಈ ವಸತಿ ಶಾಲೆಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ಶಾಲೆಯ ಮುಖ್ಯೋಪಾಧ್ಯಾಯರಿಂದ ಸರ್ಕಾರಿ/ಅಂಗೀಕೃತ ಶಾಲೆಗೆ ಸೇರಿದ ವಿದ್ಯಾರ್ಥಿಗಳೆಂದು ಧೃಡೀಕರಣ ಪತ್ರ, ವಯಸ್ಸಿನ ಪ್ರಮಾಣ ಪತ್ರ ಹಾಗೂ ತಹಶೀಲ್ದಾರ್‌ರವರಿಂದ ಪಡೆದ ಜಾತಿ/ಆದಾಯ ಪ್ರಮಾಣ ಪತ್ರಗಳೊಂದಿಗೆ ಸಲ್ಲಿಸಬೇಕು. |

| | | |
|---|---|---|
| 4 | ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ | ಕರ್ನಾಟಕ ರಾಜ್ಯಾದ್ಯಂತ ಜೈನ್ ಅಲ್ಪಸಂಖ್ಯಾತರ ಸಮುದಯವನ್ನು ಪ್ರೋತ್ಸಾಹಿಸುವ ಉದ್ದೇಶದಲ್ಲಿ ಜೈನ್ ದೇವಾಲಯ (ಬಸದಿ)ಗಳ ನವೀಕರಣ/ದುರಸ್ಥಿ/ಜೀರ್ಣೋದ್ಧಾರಕ್ಕಾಗಿ ಕೈಗೊಳ್ಳುವುದು ಮೂಲಕ ಧಾರ್ಮಿಕ ಸ್ವತ್ತುಗಳ ಸಂರಕ್ಷಣೆಗಾಗಿ ಮತ್ತು ಉತ್ತಮ ಸ್ಥಿತಿಯಲ್ಲಿ ಕಾಪಾಡುವುದು ಅಗತ್ಯವೆಂದು ಕಂಡು ಬಂದಿದೆ ಮತ್ತು ಈ ಉದ್ದೇಶಕ್ಕಾಗಿ ಅರ್ಹ ಜೈನ್ ದೇವಾಲಯ (ಬಸದಿ) ಗಳಿಗೆ ಸಹಾಯಾನುದನವನ್ನು ನೀಡಲು ರಾಜ್ಯದ ಆಯವ್ಯಯದಲ್ಲಿ ಅನುದಾನ ನಿಗಧಿಪಡಿಸಲಾಗಿದೆ. ಸದರಿ ಕಾರ್ಯಕ್ರಮದಡಿ ಇಚ್ಛೆಯುಳ್ಳ ಜೈನ್ ದೇವಾಲಯ(ಬಸದಿ)ಗಳ ವ್ಯವಸ್ಥಾಪನ/ಜೀರ್ಣೋಧ್ಧಾರ ಸಮಿತಿಯವರು ಅನುದಾನ ಪಡೆಯಲು ಮುಂದೆ ಬಂದಲ್ಲಿ ಅಂಥಹ ದೇವಾಲಯ/ಬಸದಿಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಕೆಳಕಂಡ ಅರ್ಹತೆಯನ್ನು ಹೊಂದಿರಬೇಕು.<br>**ಅರ್ಹತೆಗಳು:–**<br>1) ನಿಗಧಿತ ನಮೂನೆಯಲ್ಲಿ ಅರ್ಜಿ<br>2) ದೇವಾಲಯ/ಸಂಸ್ಥೆಯ ನೊಂದಣಿ ಪ್ರಮಾಣ ಪತ್ರ (ಭಾರತೀಯ ನ್ಯಾಸ ಅಧಿನಿಯಮ ಅಥವಾ ಕರ್ನಾಟಕ ಸಂಘ ಸಂಸ್ಥೆಗಳ ನೊಂದಣಿ ಅಧಿನಿಯಮದ ಮೇರೆಗೆ ನೊಂದಾವಣೆಯಾಗಿರಬೇಕು ಅಥವಾ ಸಂಬಂಧಪಟ್ಟ ತಾಲ್ಲೂಕಿನ ತಹಸಿಲ್ದಾರರಿಂದ ದೇವಾಲಯ/ಬಸದಿ ಇರುವ ಬಗ್ಗೆ ಪ್ರಮಾಣ ಪತ್ರ ಸಲ್ಲಿಸಬೇಕು<br>3) ಒಂದು ವರ್ಷದ ಆಡಿಟ್ ರಿಪೋರ್ಟ್ (ಚಾರೆಟ್ಡ್ ಅಕೌಂಟೆಂಟ್ ರಿಂದ ತಯಾರಿಸಿರಬೇಕು) ವಾರ್ಷಿಕ ಲೆಕ್ಕ ಪತ್ರ ವರದಿ.<br>4) ಅಂದಾಜು ಪಟ್ಟಿ (ದೇವಸ್ಥಾನದ ವ್ಯಾಪ್ತಿಗೆ ಬರುವ ಸ್ಥಳೀಯ ಸರ್ಕಾರಿ ಅಭಿಯಂತರರು ಅಥವಾ ಇತರೆ ಅನುಮೋದಿತ ಅಭಿಯಂತರರು).<br>5) ದೇವಾಲಯ/ವ್ಯವಸ್ಥಾಪನಾ ಸಮಿತಿ ಹೆಸರಿನಲ್ಲಿ ನಿವೇಶನ ಪತ್ರ<br>6) ದೇವಾಲಯ ಆಡಳಿತಕ್ಕೆ ವಿಧ್ಯುಕ್ತವಾಗಿ ಚುನಾಯಿತಗೊಂಡ ಆಡಳಿತ ಮಂಡಳಿ ಪಟ್ಟಿ<br>7) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಸ್ಥಳ ತನಿಖಾ ವರದಿ.<br>8) ದೇವಾಲಯದ ಛಾಯಾ ಚಿತ್ರಗಳನ್ನು ಹಿಂಬದಿಯಲ್ಲಿ ಜಿಲ್ಲಾ ಅಧಿಕಾರಿಗಳು ದೃಢೀಕರಿಸಿರಬೇಕು<br>9) ಮುಚ್ಚಳಿಕೆ ಪತ್ರ<br>10) ಈ ಯೋಜನೆಯಡಿ ಅನುದಾನ ಪಡೆಯುವ ದೇವಾಲಯ/ ಬಸದಿ ಮುಜಾರಾಯಿ ಇಲಾಖೆಯಿಂದ ಇದೇ ಉದ್ದೇಶಕ್ಕೆ ಅನುದಾನ ಪಡೆಲಾಗಿದೆಯೇ/ ಇಲ್ಲವೇ ಎಂಬ ಬಗ್ಗೆ ಸ್ಥಳೀಯ ತಹಸಿಲ್ದಾರ ಕಛೇರಿಯಿಂದ ದೃಢೀಕರಣ ಪಡಿದು ಸಲ್ಲಿಸುವುದು.<br>11) ಕರ್ನಾಟಕ ರಾಜ್ಯದಲ್ಲಿರುವ ಬೌದ್ಧ ವಿಹಾರ (ದೇವಾಲಯ) ಗಳ ನವೀಕರಣ/ದುರಸ್ಥಿ/ಜೀರ್ಣೋಧ್ಧಾರಕ್ಕಾಗಿ ಸಹಾಯಾನುದಾನ ಬಿಡುಗಡೆ ಮಾಡಲು ಮಾರ್ಗಸೂಚಿಗಳು:–<br>ಕರ್ನಾಟಕ ರಾಜ್ಯಾದ್ಯಂತ ಬೌದ್ಧ ಅಲ್ಪಸಂಖ್ಯಾತರ ಸಮುದಾಯವನ್ನು ಪ್ರೋತ್ಸಾಹಿಸುರವ ಉದ್ದೇಶದಲ್ಲಿ ಬೌದ್ಧ ವಿಹಾರ (ದೇವಾಲಯ)ಗಳಿಗೂ ನವೀಕರಣ/ದುರಸ್ಥಿ/ಜೀರ್ಣೋಧ್ಧಾರ ಕೈಗೊಳ್ಳವುದರ ಮೂಲಕ ಧಾರ್ಮಿಕ ಸ್ವತ್ತುಗಳ ಸಂರಕ್ಷಣೆಯೊಂದಿಗೆ ಇವುಗಳನ್ನು ಉತ್ತಮ ಸ್ಥಿತಿಯಲ್ಲಿ ಕಾಪಾಡುವುದು ಅಗತ್ಯವೆಂದು ಕಂಡು ಬಂದಿದೆ. ಈ ಉದ್ದೇಶಕ್ಕಾಗಿ ಅರ್ಹ ಬೌದ್ಧ ವಿಹಾರ (ದೇವಾಲಯ) ಗಳಿಗೆ ಸಹಾಯಾನುದಾನವನ್ನು ನೀಡಲು ರಾಜ್ಯದ ಆಯವ್ಯದಲ್ಲಿ ಅನುದಾನ ನಿಗದಿ ಪಡಿಸಲಾಗಿದೆ. ಸದರಿ ಕಾರ್ಯಕ್ರಮದಡಿ ಇಚ್ಛೆಯುಳ್ಳ ಬೌದ್ಧ ವಿಹಾರ (ದೇವಾಲಯ)ಗಳಿಗೂ ವ್ಯವಸ್ಥಾಪನ/ಜೀರ್ಣೋದ್ದಾರ ಸಮಿತಿಯವರು ಅನುದಾನ ಪಡೆಯಲು ಮುಂದೆ ಬಂದಲ್ಲಿ ಅಂಥಹ ಬೌದ್ಧ ವಿಹಾರ (ದೇವಾಲಯ)ಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಕೆಳಕಂಡ ಅರ್ಹತೆಯನ್ನು ಹೊಂದಿರಬೇಕು.<br>**ಅರ್ಹತೆಗಳು:–**<br>1. ನಿಗದಿತ ನಮೂನೆಯಲ್ಲಿ ಅರ್ಜಿ<br>2. ದೇವಾಲಯ/ಸಂಸ್ಥೆಯ ನೊಂದಣಿ ಪ್ರಮಾಣ ಪತ್ರ (ಭಾರತೀಯ ನ್ಯಾಸ ಅಧಿನಿಯಮ ಅಥವಾ ಕರ್ನಾಟಕ ಸಂಘ ಸಂಸ್ಥೆಗಳ ನೊಂದಣಿ ಅಧಿನಿಯಮನ ಮೇರೆಗೆ ನೊಂದಾವಣೆಯಾಗಿರಬೇಕು ಅಥವಾ ಸಂಬಂಧಪಟ್ಟ ತಾಲ್ಲೂಕಿನ ತಹಸಿಲ್ದಾರರಿಂದ ದೇವಾಲಯ/ಬಸದಿ ಇರುವ ಬಗ್ಗೆ ಪ್ರಮಾಣ ಪತ್ರ ಸಲ್ಲಿಸಬೇಕು. ಒಂದು ವರ್ಷದ ಆಡಿಟ್ ರಿಪೋರ್ಟ (ಚಾರೆಟ್ಡ್ ಅಕೌಂಟೆಂಟ್‌ರಿಂದ ತಯಾರಿಸಿರಬೇಕು) ವಾರ್ಷಿಕ ಲೆಕ್ಕ ಪತ್ರ ವರದಿ.<br>3. ಅಂದಾಜು ಪಟ್ಟಿ (ದೇವಸ್ಥಾನದ ವ್ಯಾಪ್ತಿಗೆ ಬರುವ ಸ್ಥಳಿಯ ಸರ್ಕಾರಿ ಅಭಿಯಂತರರು ಅಥವಾ ಇತರೆ ಅನುಮೋದಿತ ಅಭಿಯಂತರರು).<br>4. ದೇವಾಲಯ/ವ್ಯವಸ್ಥಾಪನಾ ಸಮಿತಿ ಹೆಸರಿನಲ್ಲಿ ನಿವೇಶನ ಪತ್ರ<br>5. ದೇವಾಲಯ ಆಡಳಿತಕ್ಕೆ ವಿಧ್ಯುಕ್ತವಾಗಿ ಚುನಾಯಿತಗೊಂಡ ಆಡಳಿತ ಮಂಡಳಿ ಪಟ್ಟಿ<br>6. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರ ಸ್ಥಳ ತನಿಖಾ ವರದಿ. ದೇವಾಲಯದ ಛಾಯಾ ಚಿತ್ರಗಳನ್ನು ಹಿಂಬದಿಯಲ್ಲಿ ಜಿಲ್ಲಾ ಅಧಿಕಾರಿಗಳು ಧೃಡೀಕರಿಸಿರಬೇಕು<br>7. ಮುಚ್ಚಳಿಗೆ ಪತ್ರ<br>**4 (ಬಿ) <u>ಸಿಖ್ ಸಮುದಾಯದ ಗುರುದ್ವಾರಗಳ ನವೀಕರಣ/ದುರಸ್ಥಿ/ಜೀರ್ಣೋದ್ದಾರಕ್ಕಾಗಿ ಸಹಾಯಧನ:–</u>**<br>ಕರ್ನಾಟಕ ರಾಜ್ಯದಲ್ಲಿರುವ ಸಿಖ್ ಸಮುದಾಯದ ಗುರುದ್ವಾರಗಳ ದುರಸ್ಥಿ/ಜೀರ್ಣೋದ್ದಾರ/ನವೀಕರಣಕ್ಕಾಗಿ ಸಹಾಯಾನುದಾನವನ್ನು ನೀಡಲು 2017–18ನೇ ಸಾಲಿನಿಂದ ಜಾರಿಗೆ ಬರುವಂತೆ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.<br><br>**<u>ಕರ್ನಾಟಕ ರಾಜ್ಯದಲ್ಲಿರುವ ಸಿಖ್ ಸಮುದಾಯದ ಗುರುದ್ವಾರಗಳ ನವೀಕರಣ /ದುರಸ್ಥಿ/ ಜೀರ್ಣೋದ್ಧಾರಕ್ಕಾಗಿ</u>** |

| | | |
|---|---|---|
| | | <u>ಸಹಾಯಾನುದಾನ ಬಿಡುಗಡೆ ಮಾಡಲು ಮಾರ್ಗಸೂಚಿಗಳು</u><br>ಕರ್ನಾಟಕ ರಾಜ್ಯದಲ್ಲಿನ ಸಿಖ್ ಅಲ್ಪಸಂಖ್ಯಾತರ ಸಮುದಾಯದ ಗುರುದ್ವಾರಗಳ ನವೀಕರಣ/ದುರಸ್ಥಿ/ಜೀರ್ಣೋದ್ಧಾರವನ್ನು ಕೈಗೊಳ್ಳುವ ಮೂಲಕ ಧಾರ್ಮಿಕ ಸ್ವತ್ತುಗಳು ಸಂರಕ್ಷಣೆಗಾಗಿ ಮತ್ತು ಉತ್ತಮ ಸ್ಥಿತಿಯಲ್ಲಿ ಕಾಪಾಡುವುದು ಅಗತ್ಯವೆಂದು ಕಂಡು ಬಂದಿರುವುದರಿಂದ ಈ ಉದ್ದೇಶಕ್ಕಾಗಿ ಅರ್ಹ ಗುರುದ್ವಾರಗಳಿಗೆ ಸಹಾಯಾನುದಾನವನ್ನು ನೀಡಲು ಉದ್ದೇಶಿಸಲಾಗಿದೆ.<br>**ಅರ್ಹತೆಗಳು:–**<br>1. ನಿಗದಿತ ನಮೂನೆಯಲ್ಲಿ ಅರ್ಜಿ ದೇವಾಲಯ/ಸಂಸ್ಥೆಯ ನೊಂದಣಿ ಪ್ರಮಾಣ ಪತ್ರ (ಭಾರತೀಯ ನ್ಯಾಸ ಅಧಿನಿಯಮ ಅಥವಾ ಕರ್ನಾಟಕ ಸಂಘ ಸಂಸ್ಥೆಗಳ ನೊಂದಣಿ ಅಧಿನಿಯಮನ ಮೇರೆಗೆ ನೊಂದಾವಣೆಯಾಗಿರಬೇಕು ಅಥವಾ ಸಂಬಂಧಪಟ್ಟ ತಾಲ್ಲೂಕಿನ ತಹಸಿಲ್ದಾರರಿಂದ ದೇವಾಲಯ/ಬಸದಿ ಇರುವ ಬಗ್ಗೆ ಪ್ರಮಾಣ ಪತ್ರ ಸಲ್ಲಿಸಬೇಕು. ಒಂದು ವರ್ಷದ ಆಡಿಟ್ ರಿಪೋರ್ಟ (ಚಾರೆಟ್ಡ್ ಅಕೌಂಟೆಂಟ್‌ರಿಂದ ತಯಾರಿಸಿರಬೇಕು) ವಾರ್ಷಿಕ ಲೆಕ್ಕ ಪತ್ರ ವರದಿ.<br>2. ಅಂದಾಜು ಪಟ್ಟಿ (ದೇವಸ್ಥಾನದ ವ್ಯಾಪ್ತಿಗೆ ಬರುವ ಸ್ಥಳಿಯ ಸರ್ಕಾರಿ ಅಭಿಯಂತರರು ಅಥವಾ ಇತರೆ ಅನುಮೋದಿತ ಅಭಿಯಂತರರು).<br>3. ದೇವಾಲಯ/ವ್ಯವಸ್ಥಾಪನಾ ಸಮಿತಿ ಹೆಸರಿನಲ್ಲಿ ನಿವೇಶನ ಪತ್ರ.<br>4. ದೇವಾಲಯ ಆಡಳಿತಕ್ಕೆ ವಿದ್ಯುಕ್ತವಾಗಿ ಚುನಾಯಿತಗೊಂಡ ಆಡಳಿತ ಮಂಡಳಿ ಪಟ್ಟಿ.<br>5. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರ ಸ್ಥಳ ತನಿಖಾ ವರದಿ. ಗುರುದ್ವಾರ ಛಾಯಾ ಚಿತ್ರಗಳನ್ನು ಹಿಂಬದಿಯಲ್ಲಿ ಜಿಲ್ಲಾ ಅಧಿಕಾರಿಗಳು ಧೃಡೀಕರಿಸಿರಬೇಕು<br>6. ವ್ಯವಸ್ಥಾಪನ ಸಂಸ್ಥೆಯಿಂದ ಪಡೆದ ಮುಚ್ಚಳಿಗೆ ಪತ್ರ |
| 5 | **ಅಲ್ಪಸಂಖ್ಯಾತರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ** | ಕೇಂದ್ರ ಮತ್ತು ಕರ್ನಾಟಕ ಲೋಕಸೇವಾ ಆಯೋಗಗಳು ಹಾಗೂ ಇತರೆ ನೇಮಕಾತಿ ಪ್ರಾಧಿಕಾರಿಗಳು ನಡೆಸುವ ಪರೀಕ್ಷೆಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯ ಸರ್ಕಾರವು ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಪೋಲಿಸ್ ಇಲಾಖೆಯ (ಸಿ) ವರ್ಗದ ಮತ್ತು ಬ್ಯಾಂಕ್ ಅಧಿಕಾರಿಗಳ ಹುದ್ದೆಗಳಿಗೆ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳ ಮೂಲಕ ಪರೀಕ್ಷಾ ಪೂರ್ವ ತರಬೇತಿ ನೀಡಲಾಗುವುದು ಹಾಗೂ ದ್ವಿತಿಯ ಪಿಯುಸಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವಿವಿಧ ಸಂಸ್ಥೆಗಳಿಂದ ಸಿ.ಇ.ಟಿ ತರಬೇತಿ ನೀಡಲಾಗುವುದು.<br>**ಷರತ್ತುಗಳು:**<br>1. ಪ್ರವರ್ಗ–ಕ್ಕೆ ಸೇರಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳ ವಾರ್ಷಿಕ ವರಮಾನವು 4.50 ಲಕ್ಷಕ್ಕೆ ಮೀರಿರಬಾರದು ಹಾಗೂ ಇತರೆ ಪ್ರವರ್ಗದ ಅಭ್ಯರ್ಥಿಯ ಕುಟುಂಬದ ವಾರ್ಷಿಕ ವರಮಾನವು 3.50 ಲಕ್ಷ ಮೀರಿರಬಾರದು.<br>2. ಅಭ್ಯರ್ಥಿಗಳ ವಯೋಮಿತಿಯು ಕನಿಷ್ಠ 21 ವರ್ಷಗಳಾಗಿದ್ದು ಗರಿಷ್ಠ ವಯೋಮಿತಿಯು ಪ್ರಾಧಿಕಾರ ನಿಗದಿಪಡಿಸುವಂತೆ ಇರಬೇಕು.<br>3. ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳ ತರಬೇತಿ ಶುಲ್ಕ ಮತ್ತು ಮಾಸಿಕ ಶಿಷ್ಯವೇತನವನ್ನು ಇಲಾಖೆಯಿಂದ ನೀಡಲಾಗುವುದು.<br>4. ಕೇಂದ್ರ ಲೋಕಸೇವಾ ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ದೆಹಲಿಯಲ್ಲಿ ಪರೀಕ್ಷಾ ಪೂರ್ವ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಮಾಸಿಕ ರೂ. 13,000/– ಬೆಂಗಳೂರು ಪಟ್ಟಣದ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ಮಾಹೆಯಾನ 6000 ರಂತೆ 7 ತಿಂಗಳ ಅವಧಿಗೆ ಸ್ಟೈಫೆಂಡ್ ಮಾತ್ರ ನೀಡಲಾಗುವುದು. ಮತ್ತು ಕರ್ನಾಟಕ ಲೋಕ ಸೇವಾ ಆಯೋಗವು ನಡೆಸುವ ಪರೀಕ್ಷೆಗಳಿಗೆ ಹೊರ ಜಿಲ್ಲೆಗಳಿಂದ ಬಂದ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 6,000/–ರಂತೆ ಸ್ಥಳೀಯ ಅಭ್ಯರ್ಥಿಗಳಿಗೆ ಮಾಹೆಯಾನ 3000 ರೂ ಗಳ ಸ್ಟೈಫೆಂಡ್ ಅನ್ನು ಗರಿಷ್ಠ 6 ತಿಂಗಳಿಗೆ ಮಾತ್ರ ನೀಡಲಾಗುವುದು.<br><br>**ಅ) ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿಗೆ ಸೇನೆಯಲ್ಲಿ ನೇಮಕಾತಿ:–**<br>ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿಗೆ ಸೇನೆಯಲ್ಲಿ ನೇಮಕಾತಿ ಪಡೆಯುವ ಸಲುವಾಗಿ ಪೂರ್ವಭ ತರಬೇತಿಯನ್ನು ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.<br><br><u>ಷರತ್ತುಗಳು:</u><br>1) ಭಾರತೀಯ ಭೂಸೇನೆ, ನೌಕಾಸೇನೆ, ವಾಯುಸೇನೆ ಹಾಗೂ ಇತ್ಯಾದಿ ಸೇನೆಗಳಿಗೆ ಸೇರಬಯಸುವ ರಾಜ್ಯದ ಅಲ್ಪಸಂಖ್ಯಾತ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಯನ್ನು ನೀಡುವುದು.<br>2) ಸದರಿ ತರಬೇತಿಗೆ ತಗಲುವ ಸಂಪೂರ್ಣ ವೆಚ್ಚವನ್ನು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಸಂಸ್ಥೆಗೆ ಪಾವತಿಸುವುದು.<br>3) ಸದರಿ ತರಬೇತಿಗೆ ನಿಗದಿತ ಶೈಕ್ಷಣಿಕ, ದೈಹಿಕ ಮತ್ತು ಮಾನಸಿಕ ಅರ್ಹತೆಯನ್ನು ಹೊಂದಿರುವ ಅಲ್ಪಸಂಖ್ಯಾತರ ವರ್ಗಗಳ ಅರ್ಹ ಅಭ್ಯರ್ಥಿಗಳನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಆಯ್ಕೆ ಮಾಡುವುದು. |

| | | |
|---|---|---|
| | | 4) ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಸದರಿ ತರಬೇತಿಯ ಸೌಲಭ್ಯವನ್ನು ಒದಗಿಸುವುದು.<br>5) ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.6.00 ಲಕ್ಷಕ್ಕಿಂತ ಮೀರಿರಬಾರದು.<br>6) ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>7) ತರಬೇತಿ ನೀಡುವವರು ಬಯೋಮೆಟ್ರಿಕ್ ಹಾಜರಾತಿ ಉಪಕರಣವನ್ನು ಸ್ವಂತ ವೆಚ್ಚದಲ್ಲಿ ಅಳವಡಿಸಿಕೊಂಡು, ತರಬೇತಿ ಅವಧಿಯಲ್ಲಿ ಅಭ್ಯರ್ಥಿಗಳ ಹಾಜರಾತಿಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರಿಗೆ ಸಲ್ಲಿಸುವುದು.<br>8) ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಶೇ 80 ರಷ್ಟು ಹಾಜರಾತಿಯು ಕಡ್ಡಾಯವಾಗಿರುತ್ತದೆ.<br>9) ತರಬೇತಿಯನ್ನು ಸಕಾರಣವಿಲ್ಲದೇ ಮಧ್ಯಂತರದಲ್ಲಿ ಬಿಟ್ಟು ಹೋಗುವ ಅಭ್ಯರ್ಥಿಗಳಿಂದ, ಅವರ ತರಬೇತಿಗೆ ಆಗಿರುವ ಖರ್ಚು ವೆಚ್ಚವನ್ನು ವಸೂಲಿ ಮಾಡತಕ್ಕದ್ದು.<br>10) ತರಬೇತಿಯನ್ನು ಪೂರ್ಣಗೊಳಿಸಲು ಅಭ್ಯರ್ಥಿಗಳಿಗೆ ಸದರಿ ತರಬೇತಿ ಪಡೆದಿರುವ ಬಗ್ಗೆ ಪ್ರಮಾಣ ಪತ್ರವನ್ನು ವಿತರಿಸುವುದು.<br>11) ಸದರಿ ತರಬೇತಿಯ ಅವಧಿಯು ಮುಕ್ತಾಯಗೊಂಡ ನಂತರ ತರಬೇತಿ ಕಾರ್ಯಕ್ರಮದ ಬಗ್ಗೆ ಅಂತಿಮ ವರದಿಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಸಲ್ಲಿಸುವುದು.<br>12) ಸದರಿ ತರಬೇತಿಯನ್ನು ಪಡೆದು ಸೇನೆಯಲ್ಲಿ ವಿವಿಧ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳ ಮಾಹಿತಿಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರಿಗೆ ಕಾಲ ಕಾಲಕ್ಕೆ ಸಲ್ಲಿಸುವುದು.<br>13) ಈಗಾಗಲೇ ದೈಹಿಕ ಪರೀಕ್ಷೆಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಕೇವಲ ಲಿಖಿತ ಪರೀಕ್ಷೆಯನ್ನು ಮಾತ್ರ ನಡೆಸತಕ್ಕದ್ದು.<br>14) ಈ ಯೋಜನೆಯ ಪ್ರಚಾರ ಕಾರ್ಯವನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರು ಕೈಗೊಳ್ಳತಕ್ಕದ್ದು. |
| 6 | ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ | ವಿದ್ಯಾಸಿರಿ ಯೋಜನೆಯು ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮೀಸಲಿರಿಸಲಾಗಿದೆ. ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ (ಪಿ.ಯು.ಸಿ ಯಿಂದ ಪಿ.ಹೆಚ್.ಡಿ ವರೆಗೂ) ಸರ್ಕಾರಿ, ಅನುದಾನ/ಅನುದಾನ ರಹಿತ ಕಾಲೇಜು/ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು ಅಂತಹ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದ ಸೌಕರ್ಯ ತಲುಪದೇ ಇರುವಂತಹ ವಿದ್ಯಾರ್ಥಿಗಳಿಗೆ ಈ ಯೋಜನೆ ಅನುಷ್ಠಾನಗೊಳಿಸಲಾಗಿದೆ.<br><br>ಅರ್ಹತೆ ಮತ್ತು ನಿಬಂಧನೆಗಳು:<br><br>1. ವಿದ್ಯಾರ್ಥಿಯು ಕರ್ನಾಟಕ ರಾಜ್ಯ ನಿವಾಸಿಯಾಗಿರಬೇಕು.<br>2. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ವರಮಾನವು 2 ಲಕ್ಷಕ್ಕಿಂತ ಕಡಿಮೆಯಾಗಿರಬೇಕು.<br>3. ಪ್ರವರ್ಗ–1 ಮತ್ತು ಕ್ರೈಸ್ತ ಸಮುದಾಯಕ್ಕೆ ಪರಿವರ್ತನೆಯಾಗಿರುವ ವಿದ್ಯಾರ್ಥಿಗಳ ವಾರ್ಷಿಕ ವರಮಾನ 2.50 ಕ್ಕಿಂತ ಕಡಿಮೆಯಿರಬೇಕು.<br>4. ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿದ್ದು ಅವರ ನಿಲಯದಿಂದ ಅವರ ಕಾಲೇಜು 5 ಕಿ.ಮೀ ಕಿಂತ ದೂರವಿರಬೇಕು.<br>5. ವಿದ್ಯಾರ್ಥಿಯು ಅವರ ಹಿಂದಿನ ವರ್ಷದ ಪರೀಕ್ಷೆಗಳಲ್ಲಿ ಯಾವುದೇ ಬ್ಯಾಕ್‌ಲ್ಯಾಗ್ ಇರಬಾರದು.<br>6. ಬಿ.ಬಿ.ಎಂ.ಪಿ, ಕಾರ್ಪೋರೇಷನ್, ಟೌನ್ ಮುನ್ಸಿಪಲ್ ಹಾಗೂ ಪಟ್ಟಣ ಪ್ರದೇಶದಲ್ಲಿ ನಿವಾಸಿಯಾದ ವಿದ್ಯಾರ್ಥಿಗಳು ಈ ಸೌಲಭ್ಯಕ್ಕೆ ಅರ್ಹರಾಗಿರುವುದಿಲ್ಲ.<br>7. ನಿಲಯಗಳು/ಪಿ.ಜಿ ಹೌಸಸ್ ಅಥವಾ ಬಾಡಿಗೆ ಮನೆಗಳಲ್ಲಿ ವಾಸವಿರುವ ವಿದ್ಯಾರ್ಥಿಗಳು ಈ ಸೌಲಭ್ಯಕ್ಕ ಅರ್ಹರಾಗಿರುತ್ತಾರೆ.<br>8. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಾಸಿಕ 1500 ಗಳಂತೆ 10 ತಿಂಗಳಿಗೆ ಗರಿಷ್ಠ 15,000 ರೂ ಗಳನ್ನು ಅವರ ವಿದ್ಯಾಭ್ಯಾಸದ ಅವಧಿಯಲ್ಲಿ ನೀಡಲಾಗುವುದು |
| 7 | ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ | (ಎ) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮ:<br>1) 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು.<br>2) ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 1.00 ಲಕ್ಷಕ್ಕೆ ಮೀರಿರಬಾರದು.<br>3) ವಿದ್ಯಾರ್ಥಿಯು ಹಿಂದಿನ ತರಗತಿಯಲ್ಲಿ ಶೇ.50 ರಷ್ಟು ಅಂಕ ಗಳಿಸಿರಬೇಕು (1ನೇ ತರಗತಿ ಹೊರತುಪಡಿಸಿ) ಶೇ30ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ನೀಡಲಾಗುತ್ತಿದೆ.<br>4) ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ/ರಹಿತ ಹಾಗೂ ಖಾಸಗಿ ಶಾಲೆಗಳು 1 ರಿಂದ 10ನೇ ತರಗತಿ ವರೆಗೆ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ |

ವಿದ್ಯಾರ್ಥಿಗಳಿಗೆ ವರ್ಷ ಒಂದಕ್ಕೆ ರೂ. 1000 ರಿಂದ 5000 ರವರೆಗೆ ವಿದ್ಯಾರ್ಥಿವೇತನ ನೀಡಲಾಗುವುದು.

(ಬಿ) ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ:

ಪದವಿಪೂರ್ವ, ಪದವಿ ಸ್ನಾತಕೋತ್ತರ ಹಾಗೂ ಪಿ.ಹೆಚ್.ಡಿ.ಯವರಿಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರಿಗೆ ಅವಕಾಶವಿದೆ.

1) ಹಿಂದಿನ ತರಗತಿಗಳಲ್ಲಿ ಶೇ.50 ರಷ್ಟು ಅಂಕ ಗಳಿಸಿರಬೇಕು.
2) ಕುಟುಂಬದ ವಾರ್ಷಿಕ ವರಮಾನ ರೂ. 2 ಲಕ್ಷಕ್ಕೆ ಮೀರಿರಬಾರದು.
3) ಶೇ30ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ಮೀಸಲಿರಿಸಿದೆ.
4) ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ/ರಹಿತ ಹಾಗೂ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಪಾವತಿಸಿದ ದಾಖಲಾತಿ ಶುಲ್ಕ ಹಾಗೂ ಬೋಧನ ಶುಲ್ಕ ಆಧಾರದನ್ವಯ ಗರಿಷ್ಠ ರೂ.3500/- ರಿಂದ ರೂ.7500/-ರವರೆಗೆ ಪ್ರತಿ ವರ್ಷಕ್ಕೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ.

(ಸಿ)ಮೆರಿಟ್ - ಕಮ್-ಮೀನ್ಸ್ ಆಧಾರಿತ ವಿದ್ಯಾರ್ಥಿ ವೇತನ:

ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಿಗೆ ಅವಕಾಶವಿದೆ.

1) ಈ ಯೋಜನೆಯಡಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು.
2) ವಿದ್ಯಾರ್ಥಿಯು ಶೇ 50 ರಷ್ಟು ಅಂಕಗಳಿಸಿರಬೇಕು.
3) ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳು ಮೀರಿರಬಾರದು
4) ಶೇ 30 ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ಮೀಸಲ್ಪಟ್ಟಿಸಿದೆ.
5) ಗರಿಷ್ಠ ರೂ. 30 ಸಾವಿರದವರೆಗೆ ಶುಲ್ಕ ಮರುಪಾವತಿಸಲು ಅವಕಾಶವಿದೆ.

ಶುಲ್ಕ ಮರುಪಾವತಿ ಯೋಜನೆ ಅನುಷ್ಠಾನದ ಮಾರ್ಗಸೂಚಿಗಳು.

ಈ ಯೋಜನೆಗಾಗಿ ಪ್ರತ್ಯೇಕ ಅಧಿಸೂಚನೆ ಹೊರಡಿಸಲಾಗುವುದಿಲ್ಲ. ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಮೆಟ್ರಿಕ್ ನಂತರ ಮತ್ತು ಮೆರಿಟ್ ಕಮ್ ಮೀನ್ಸ್ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ (Online) ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪೈಕಿ ಅರ್ಹ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ **ಮಾಡಲಾಗುವುದು.**

ಕೇಂದ್ರ ಸರ್ಕಾರದ ಮೇರಿಟ್ ಕಂ ಮೀನ್ಸ್ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಸಲು ನಿಗದಿತ ಕಾಲಮಿತಿ ಇದ್ದು ರಾಜ್ಯದಲ್ಲಿ ಕೆಲವು ಕೋರ್ಸ್‌ಗಳು ಕೌನ್ಸಿಲಿಂಗ್ ಮೂಲಕ ತಡವಾಗಿ ಆರಂಭವಾಗಿರುವುದಲ್ಲದೇ ತಾಂತ್ರಿಕ ಕಾರಣಗಳಿಂದ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು ನೇರವಾಗಿ ನಿರ್ದೇಶನಾಲಯಕ್ಕೆ ಅರ್ಜಿ ಸಲ್ಲಿಸಿ ವಿದ್ಯಾರ್ಥಿ ವೇತನ ಜೋತೆಗೆ ಶುಲ್ಕ ಮರುಪಾವತಿ ಪಡೆಯಬಹುದಾಗಿದೆ.

ಕೇಂದ್ರ ಸರ್ಕಾರದಿಂದ ಆಯ್ಕೆಯಾದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನ ಮೊತ್ತ ಕಡಿಮೆ ಇರುವುದರಿಂದ ಹೊಂದಾಣಿಕೆ ಮೊತ್ತವನ್ನು ಶುಲ್ಕ ಮರುಪಾವತಿ ಯೋಜನೆಯಡಿ ನೀಡಲಾಗುವುದು.

ಕೇಂದ್ರ ಸರ್ಕಾರದ ವಿದ್ಯಾರ್ಥಿ ವೇತನದಿಂದ ವಂಚಿತರಾಗಿರುವ ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದಿಂದ ವಿದ್ಯಾರ್ಥಿ ವೇತನ ನೀಡಲಾಗುತ್ತಿದ್ದು ಸದರಿ ವಿದ್ಯಾರ್ಥಿ ವೇತನವು ಸಹ ಅಲ್ಪ ಮೊತ್ತವಾಗಿರುವುದರಿಂದ ಹೊಂದಾಣಿಕೆ ಮೊತ್ತವನ್ನು ಶುಲ್ಕ ಮರುಪಾವತಿಯಡಿ ನೀಡಲಾಗುವುದು.

**ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ**

ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಪೋಸ್ಟ್ ಡಾಕ್ಟರೇಟ್ ಕೋರ್ಸ್ ಮುಂತಾದವುಗಳನ್ನು ವಿದೇಶದ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡಲು ವಿದ್ಯಾರ್ಥಿವೇತನ ನೀಡುವ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದಿಂದ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 6 ಲಕ್ಷಕ್ಕಿಂತ ಕಡಿಮೆ ಇರುವಂತಹ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ ಗರಿಷ್ಠ 20 ಲಕ್ಷ ಮತ್ತು 6 ಲಕ್ಷಕ್ಕಿಂತ 15 ಲಕ್ಷ ಇರುವ ವಾರ್ಷಿಕ ವರಮಾನದ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ 10 ಲಕ್ಷ ವಿದ್ಯಾರ್ಥಿವೇತನವನ್ನು ನೀಡಲಾಗುವುದು. ಈ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಯ 1 ಅಥವಾ 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುವುದು.

**ಪಿಹೆಚ್‌ಡಿ ಮತ್ತು ಎಂಫಿಲ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಫೆಲೋಶಿಪ್;-**

ಭಾರತ/ಕರ್ನಾಟಕ ರಾಜ್ಯದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾನಿಯಗಳಲ್ಲಿ ಪಿಹೆಚ್‌ಡಿ ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ

| | | |
|---|---|---|
| | | ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ವಾರ್ಷಿಕ ರೂ. 1.00 ಲಕ್ಷಗಳಂತೆ ಫೆಲೋಶಿಫ್ ಮೂಲಕ ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.<br><br>**ಷರತ್ತುಗಳು:–**<br>1) ವಿದ್ಯಾರ್ಥಿಯು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು. (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಜನಾಂಗಕ್ಕೆ ಸೇರಿದವರಾಗಿರಬೇಕು)<br>2) ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>3) ಪಿಹೆಚ್‌ಡಿ/ಎಂಫಿಲ್ ವ್ಯಾಸಂಗವನ್ನು ಭಾರತ/ಕರ್ನಾಟಕ ರಾಜ್ಯದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾನಿಯಗಳಲ್ಲಿ ಮಾಡತಕ್ಕದ್ದು.<br>4) ವಿದ್ಯಾರ್ಥಿಯ ಹಾಗೂ ಕುಟುಂಬದ ವಾರ್ಷಿಕ ಆದಾಯ ಮಿತಿ ಎಲ್ಲಾ ಮೂಲಗಳಿಂದ ವರ್ಷಕ್ಕೆ ರೂ. 6.00 ಲಕ್ಷ ಮೀರಿರಬಾರದು.<br>5) ವಿದ್ಯಾರ್ಥಿಯ ವಯಸ್ಸು 35 ವರ್ಷಕ್ಕಿಂತ ಕಡಿಮೆ ಇರಬೇಕು.<br>6) ವಿದ್ಯಾರ್ಥಿಯು ಯಾವುದೇ ಸರ್ಕಾರಿ ಉದ್ಯೋಗದಲ್ಲಿರಬಾರದು. |
| 8 | ಅಲ್ಪಸಂಖ್ಯಾತರ ಕಲ್ಯಾಣ ಮದರಸಾದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು. | ಕರ್ನಾಟಕ ರಾಜ್ಯದಲ್ಲಿ ನಡೆಸಲಾಗುತ್ತಿರುವ ಮುಸ್ಲಿಂ ಸಮುದಾಯದ ವಕ್ಫ್ ನೊಂದಾಯಿತ ಮದರಸಗಳನ್ನು ಆಧುನೀಕರಣಗೊಳಿಸಲು ಹಾಗೂ ಈ ಮದರಸಗಳಿಗೆ ಮೂಲಸೌಕರ್ಯವನ್ನು ಕಲ್ಪಿಸಲು ಮತ್ತು ಈ ಮದರಸಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಔಪಚಾರಿಕ ಹಾಗೂ ಗಣಕೀಕೃತ ಶಿಕ್ಷಣವನ್ನು ನೀಡಲು ಈ ಯೋಜನೆಗೆ ಪ್ರತಿ ಸಂಸ್ಥೆಗೆ ಗರಿಷ್ಠ ರೂ. 10.00 ಲಕ್ಷಗಳನ್ನು ಮಂಜೂರಾತಿ ನೀಡಿ ಆದೇಶಿಸಿದೆ. |
| 9 | ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ | ವಸತಿ ಶಾಲೆಗಳು/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ರೂ.22000.00 ಲಕ್ಷಗಳ ಆಯವ್ಯಯವನ್ನು ಕಲ್ಪಿಸಲಾಗಿದೆ. ಇದರಲ್ಲಿ ವಸತಿ ಶಾಲೆ/ವಿದ್ಯಾರ್ಥಿನಿಲಯಗಳ ಕಟ್ಟಡಗಳ ಮುಂದುವರೆದ ಕಾಮಗಾರಿಗಳಿಗೆ ಹಾಗೂ ಹೊಸ ಕಟ್ಟಡಗಳ ನಿರ್ಮಾಣ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ದುರಸ್ತಿ ಮತ್ತು ನಿವೇಶನಗಳ ಖರೀದಿಗಾಗಿ ವಿನಿಯೋಗಿಸಲಾಗುವುದು. |
| 10 | ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ | ಭಾರತ ಸರ್ಕಾರವು 6 ಕ್ಷೇತ್ರಗಳು 28 ಪಟ್ಟಣಗಳು ಒಟ್ಟು 21 ಜಿಲ್ಲೆಗಳಲ್ಲಿ ಶೇಕಡ 25% ಕ್ಕಿಂತ ಹೆಚ್ಚಿನ ಜನಸಂಖ್ಯೆಯು ಆರ್ಥಿಕ ಮತ್ತು ಸಾಮಾಜಿಕ ವ್ಯವಸ್ಥೆಯಿಂದ ಕಡಿಮೆ ಇರುವ ಪ್ರದೇಶಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಈ ಯೋಜನೆಯು ಅಲ್ಪಸಂಖ್ಯಾತರಿಗೆ ಬೇಕಾಗಿರುವ ಮೂಲ ಸೌಕರ್ಯಗಳನ್ನು ನೀಡಿ ಅವರ ಆರ್ಥಿಕ ಮತ್ತು ಸಾಮಾಜಿಕ ಏಳಿಗೆಗಾಗಿ ಮತ್ತು ಗುಣಮಟ್ಟದ ಕೊರತೆಯನ್ನು ಸರಿಪಡಿಸಲು ಅಲ್ಪಸಂಖ್ಯಾತರು ಹೆಚ್ಚು ಇರುವ ಸ್ಥಳಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅಲ್ಪಸಂಖ್ಯಾತರಿಗೆ ಶಾಲೆಗಳು, ವಸತಿ ನಿಲಯಗಳು, ವಸತಿ ಶಾಲೆಗಳು, ಆರೋಗ್ಯ, ನಿರ್ಮಲ್ಯ ಸೌಕರ್ಯಗಳು, ಸರ್ಕಾರಿ ಶಾಲೆಗಳಿಗೆ ತಂತ್ರಜ್ಞಾನ ಸೌಕರ್ಯ ಕಲ್ಪಿಸುವುದು, ದುಡಿಯುವ ಮಹಿಳೆಯರ ವಸತಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಭರಿಸುವುದು ಇತ್ಯಾದಿಗಳು. ಸದರಿ ಯೋಜನೆಯು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. |
| 11 | ಅಲ್ಪಸಂಖ್ಯಾತರಿಗಾಗಿ ಹಾಸ್ಟಲ್‌ಗಳು | **ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳು:–**<br>1. ವಿದ್ಯಾರ್ಥಿಗಳು ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ್ದು ರಾಜ್ಯದ ನಿವಾಸಿಯಾಗಿರಬೇಕು.<br>2. ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಶಾಲೆಗಳಲ್ಲಿ ಮೆಟ್ರಿಕ್ ಪೂರ್ವ ತರಗತಿಗಳಲ್ಲಿ ಅಭ್ಯಾಸ ಮಾಡುತ್ತಿರಬೇಕು.<br>3. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು ರೂ.44,500/–ಗಳು ಹಾಗೂ ಪ್ರವರ್ಗ–1ಕ್ಕೆ ರೂ. 1.00 ಲಕ್ಷಕ್ಕೆ ಮೀರಬಾರದು.<br>4. ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ ಶೇ. 75 ರಷ್ಟು ಸ್ಥಾನಗಳನ್ನು ಅಲ್ಪಸಂಖ್ಯಾತರ ಜನಾಂಗದ ವಿದ್ಯಾರ್ಥಿಗಳಿಗೆ ಹಾಗೂ ಶೇ. 25 ರಷ್ಟು ಸ್ಥಾನಗಳನ್ನು ಹಿಂದುಳಿದ ವರ್ಗಗಳ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುವುದು.<br>5. ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ ಮುಸ್ಲಿಂ–ಶೇ.82, ಕ್ರಿಶ್ಚಿಯನ್ ಶೇ.12, ಜೈನ್ ಶೇ.4 ಬೌದ್ಧ ಶೇ.1 ಮತ್ತು ಸಿಖ್‌ರಿಗೆ ಶೇ. 1ರಷ್ಟು ಪ್ರವೇಶ ನೀಡುವುದು. ನಿರ್ದಿಷ್ಟ ಜನಾಂಗದ ವಿದ್ಯಾರ್ಥಿಗಳಿಂದ ಮೇಲಿನ ಪ್ರಮಾಣದಲ್ಲಿ ಅರ್ಜಿಗಳು ಬಾರದಿದ್ದಲ್ಲಿ ಲಭ್ಯವಿರುವ ಇತರೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಭರ್ತಿ ಮಾಡತಕ್ಕದ್ದು.<br>6. ವಿದ್ಯಾರ್ಥಿನಿಲಯಗಳಲ್ಲಿ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಶೇ.90 ಹಾಗೂ ಪಟ್ಟಣ ಪ್ರದೇಶದ ಅಭ್ಯರ್ಥಿಗಳಿಗೆ ಶೇ. 10ರಷ್ಟು ಸ್ಥಾನಗಳನ್ನು ನೀಡಬೇಕು.<br>7. ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಪಡೆಯುವ ಅಭ್ಯರ್ಥಿಗಳು ತಮ್ಮ ಹಿಂದಿನ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಎಲ್ಲಾ ವಿಷಯದಲ್ಲಿ ಉತ್ತೀರ್ಣರಾಗಿರಬೇಕು.<br>8. ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ನಿಯಮಾನುಸಾರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದು. |

| | | |
|---|---|---|
| | | **ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅನುಸರಿಸುವ ಮಾನದಂಡಗಳು:-**<br>ವಿದ್ಯಾರ್ಥಿಗಳು ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ್ದು ರಾಜ್ಯದ ನಿವಾಸಿಯಾಗಿರಬೇಕು.<br>ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ಅಭ್ಯಾಸ ಮಾಡುತ್ತಿರಬೇಕು.<br>ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು ರೂ.44,500/-ಗಳು ಹಾಗೂ ಪ್ರವರ್ಗ-1ಕ್ಕೆ ರೂ. 1.00 ಲಕ್ಷಕ್ಕೆ ಮೀರಬಾರದು.<br>ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ ಶೇ.75 ರಷ್ಟು ಸ್ಥಾನಗಳನ್ನು ಅಲ್ಪಸಂಖ್ಯಾತರ ಜನಾಂಗದ ವಿದ್ಯಾರ್ಥಿಗಳಿಗೆ ಹಾಗೂ ಶೇ.25 ರಷ್ಟು ಸ್ಥಾನಗಳನ್ನು ಹಿಂದುಳಿದ ವರ್ಗಗಳ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುವುದು.<br>ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ ಮುಸ್ಲಿಂ-ಶೇ.82, ಕ್ರಿಶ್ಚಿಯನ್ ಶೇ.12, ಜೈನ್-ಶೇ-4, ಬೌದ್ಧ-ಶೇ.1 ಮತ್ತು ಸಿಖ್‌ರಿಗೆ ಶೇ.1 ರಷ್ಟು ಪ್ರವೇಶ ನೀಡುವುದು. ನಿರ್ದಿಷ್ಟ ಜನಾಂಗದ ವಿದ್ಯಾರ್ಥಿಗಳಿಂದ ಸಾಕಷ್ಟು ಪ್ರಮಾಣದಲ್ಲಿ ಅರ್ಜಿಗಳು ಬಾರದಿದ್ದಲ್ಲಿ ಲಭ್ಯವಿರುವ ಇತರೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಭರ್ತಿ ಮಾಡತಕ್ಕದ್ದು.<br>ವಿದ್ಯಾರ್ಥಿನಿಲಯಗಳಲ್ಲಿ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಶೇ.85-90 ಹಾಗೂ ಪಟ್ಟಣ ಪ್ರದೇಶದ ಅಭ್ಯರ್ಥಿಗಳಿಗೆ ಶೇ.10-15 ರಷ್ಟು ಸ್ಥಾನಗಳನ್ನು ನೀಡಬೇಕು.<br>ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಪಡೆಯುವ ಅಭ್ಯರ್ಥಿಗಳು ತಮ್ಮ ಹಿಂದಿನ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಎಲ್ಲಾ ವಿಷಯದಲ್ಲಿ ಉತ್ತೀರ್ಣರಾಗಿರಬೇಕು.<br>ವಿದ್ಯಾರ್ಥಿನಿಲಯವನ್ನು ಶೈಕ್ಷಣಿಕ ವರ್ಷದ 10 ತಿಂಗಳ ಅವಧಿಗೆ ನಡೆಸಬೇಕು. 10 ತಿಂಗಳ ನಂತರವೂ ವಾರ್ಷಿಕ ಪರೀಕ್ಷೆಗಳು ನಡೆದಲ್ಲಿ ಈ ಅವಧಿಯನ್ನು ವಿಸ್ತರಿಸಲಾಗುವುದು.<br>ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯು ನಿಯಮಾನುಸಾರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದು. |
| 12 | **ಅಲ್ಪಸಂಖ್ಯಾತರಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ** | ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ನೀಡುತ್ತಿರುವ ಮಾಸಿಕ ಪ್ರೋತ್ಸಾಹಧನವನ್ನು ರೂ.5,000/-ಗಳಿಗೆ ಮಂಜೂರಾತಿ ನೀಡಿ ಆದೇಶಿಸಿದೆ. ತರಬೇತಿ ಅವಧಿಯು 4 ವರ್ಷಗಳಾಗಿದ್ದು ತರಬೇತಿ ಅವಧಿಯಲ್ಲಿ ಪ್ರತಿ ಅಭ್ಯರ್ಥಿಗೆ ಮಾಹೆಯಾನ ರೂ.5,000/-ದಂತೆ ತರಬೇತಿ ಭತ್ಯೆ ನೀಡಲಾಗುವುದು. ಈ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಜಿಲ್ಲಾ ಮಟ್ಟದಲ್ಲಿ, ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಆಯ್ಕೆ ಮಾಡುವುದು.<br><br>**ಈ ಕಾರ್ಯಕ್ರಮಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಮುಖ್ಯ ಅಂಶಗಳನ್ನು ಗಮನಿಸಬೇಕು.**<br>(1) ಕಾನೂನು ತರಬೇತಿ ಪಡೆಯುವ ಅಭ್ಯರ್ಥಿಯು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯಗಳಲ್ಲಿ ಯಾವುದಾದರೊಂದು ಸಮುದಾಯಕ್ಕೆ ಸೇರಿದ್ದು ರಾಜ್ಯದ ನಿವಾಸಿಯಾಗಿರಬೇಕು.<br>(2) ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ. 3.50 ಲಕ್ಷಕ್ಕೆ ಮೀರಿರಬಾರದು.<br>(3) ಅಭ್ಯರ್ಥಿಯು ಬಾರ್ ಕೌನ್ಸಿಲ್‌ನಲ್ಲಿ ಹೆಸರನ್ನು ನೊಂದಾಯಿಸಿರಬೇಕು.<br>(4) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 30 ವರ್ಷಗಳೊಳಗೆ ಇರಬೇಕು ಮತ್ತು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯು 2 ವರ್ಷಗಳ ಅವಧಿಯೊಳಗೆ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br>(5) ಅಭ್ಯರ್ಥಿಗಳ ಆಯ್ಕೆಯನ್ನು ಜಿಲ್ಲಾ ಆಯ್ಕೆ ಸಮಿತಿಯ ಮೂಲಕ ಮಾಡಲಾಗುವುದು.<br>(6) ಪ್ರತಿ ಜಿಲ್ಲೆಗೆ ಎರಡು ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕಾಗಿರುವುದರಿಂದ ಇವುಗಳಲ್ಲಿ ಒಬ್ಬ ಅಭ್ಯರ್ಥಿಯನ್ನು ಮುಸ್ಲಿಂ ಹಾಗೂ ಇನ್ನೊಬ್ಬ ಅಭ್ಯರ್ಥಿಯನ್ನು ಇತರೆ ಅಲ್ಪಸಂಖ್ಯಾತರ ಸಮುದಾಯಗಳಿಂದ ಆಯ್ಕೆ ಮಾಡಬೇಕು. |
| 13 | ಅಲ್ಪಸಂಖ್ಯಾತರ ಅನಾಥಾಲಯಗಳು-ಸಹಾಯಾನುಧಾನ | ಅನಾಥ ಮತ್ತು ನಿರ್ಗತಿಕ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವಂತೆ ಕೆಲವು ಸ್ವಯಂ ಸೇವಾ ಸಂಸ್ಥೆಗಳು ಅನಾಥಾಲಯಗಳನ್ನು ನಡೆಸುತ್ತಿವೆ. ಈ ಅನಾಥಾಲಯಗಳಲ್ಲಿ ಮಕ್ಕಳನ್ನು ಅವರ ಪ್ರೌಢ ಶಾಲಾ ಶಿಕ್ಷಣ ಮುಗಿಯುವವರೆಗೆ ಪೋಷಿಸಲು ಅವಕಾಶ ಕಲ್ಪಿಸಲಾಗುತ್ತದೆ. ಇಂತಹ ಅನಾಥಾಲಯಗಳಿಗೆ ಪ್ರೋತ್ಸಾಹ/ನೆರವು ನೀಡುವ ದೃಷ್ಟಿಯಿಂದ ಸಹಾಯಧನ ಮಂಜೂರಾತಿಗೆ ಮನವಿ ಸಲ್ಲಿಸುವ ಸಂಸ್ಥೆಗಳಿಗೆ ಮಾನ್ಯತೆ ನೀಡಿ ಸಹಾಯಧನ ಮಂಜೂರು ಮಾಡುವುದು ಈ ಕಾರ್ಯಕ್ರಮದ ಉದ್ದೇಶವಾಗಿರುತ್ತದೆ. ರಾಜ್ಯದಲ್ಲಿ ಇಂತಹ ಒಟ್ಟು 30 ಖಾಸಗಿ ಅನಾಥಾಲಯಗಳಿವೆ. ಅವುಗಳಲ್ಲಿ ಒಟ್ಟು ನಿಲಯಾರ್ಥಿಗಳ ಮಂಜೂರಾತಿ ಸಂಖ್ಯೆ 2710 ಮಾಹೆಯಾನ ರೂ.800/-ರ ದರದಲ್ಲಿ ವರ್ಷದ 12 ತಿಂಗಳುಗಳಿಗೆ ಆಹಾರ ಬಾಬ್ತು ಸಹಾಯಧನ ಮಂಜೂರು ಮಾಡಲಾಗುತ್ತದೆ.<br>**ನಿಬಂಧನೆಗಳು:**<br>1. ಅನಾಥ ವಿದ್ಯಾರ್ಥಿಗಳಿಗೆ ಆದಾಯಮಿತಿ ಇರುವುದಿಲ್ಲ.<br>2. ನಿರ್ಗತಿಕ ವಿದ್ಯಾರ್ಥಿಗಳು ವಾರ್ಷಿಕ ಆದಾಯಮಿತಿ ಪ್ರವರ್ಗ-1 ರೂ. 1.00 ಲಕ್ಷ ಪ್ರವರ್ಗ-2ಎ, 2ಬಿ, ಮತ್ತು 3ಬಿ ರೂ. 44,500/- ನಿಗದಿಪಡಿಸಿದೆ.<br>3. 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ನಿರ್ಗತಿಕ ಹಾಗೂ ಅನಾಥ ಮಕ್ಕಳು ಸೌಲಭ್ಯಕ್ಕೆ ಅರ್ಹರು. |

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು

ಅನುಬಂಧ - 2

# ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು

## ನಿಗಮದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಯೋಜನೆಗಳು

1. 'ವೃತ್ತಿ ಪ್ರೋತ್ಸಾಹ ಯೋಜನೆ' **(ಪರಿಷ್ಕೃತ)**
2. 'ಅರಿವು' (ವಿದ್ಯಾಭ್ಯಾಸ ಸಾಲ) ಸಾಲ ಯೋಜನೆ **(ಪರಿಷ್ಕೃತ)**

3.ಗಂಗಾ ಕಲ್ಯಾಣ ಯೋಜನೆ

4.'ಶ್ರಮಶಕ್ತಿ' ಯೋಜನೆ

5.ಸಣ್ಣ (ಮೈಕ್ರೋ) ಸಾಲ ಮತ್ತು ಸಹಾಯಧನ ಯೋಜನೆ

6.ಮೈಕ್ರೋ ವೈಯುಕ್ತಿಕ (ಸಣ್ಣ) (ಕೋವಿಡ್19) ಸಾಲ ಯೋಜನೆ

7.ಗೃಹ ನಿರ್ಮಾಣ – ಮಾರ್ಜಿನ್ ಹಣ ಸಾಲ ಯೋಜನೆ

8.ಪಶು ಸಂಗೋಪನೆ ಯೋಜನೆ

9.ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿಸಲು ಸಹಾಯಧನ ಯೋಜನೆ **(ಪರಿಷ್ಕೃತ)**

10.ಅಲ್ಪಸಂಖ್ಯಾತರ ರೈತರ ಕಲ್ಯಾಣ ಯೋಜನೆ.

11."ಆಟೋ ಮೊಬೈಲ್ ಸರ್ವಿಸ್, ಬಿದರಿ ಮತ್ತು ರೇಷ್ಮೆ, ಚನ್ನಪಟ್ಟಣ ಕರಕುಶಲ ಚಟುವಟಿಕೆಗಳಿಗೆ ತರಬೇತಿ ಪ್ರೋತ್ಸಾಹ ಹಾಗೂ ಸಾಲ ಮತ್ತು ಸಹಾಯಧನ ಹಾಗೂ ಮೂಲಭೂತ ಸೌಕರ್ಯ ನೀಡಲಾಗುವುದು."

12.ಮನೆ ಮಳಿಗೆ ಯೋಜನೆ.

**13. ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮದ (ಎನ್.ಎಂ.ಡಿ.ಎಫ್.ಸಿ) ಯೋಜನೆಗಳು**

**ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಆನ್-ಲೈನ್ ಮೂಲಕ ಕೆಳಕಂಡ ವೆಬ್ ಪೇಜ್ ನಲ್ಲಿ ಸಲ್ಲಿಸತಕ್ಕದ್ದು.**

**'ಅರಿವು (ವಿದ್ಯಾಭ್ಯಾಸ ಸಾಲ) Kmdc.kar.nic.in/arivu2**

**ಇತರೆ ಎಲ್ಲಾ ಯೋಜನೆಗಳು Kmdc.kar.nic.in/loan/login.aspx**

**ಮೈಕ್ರೋ ಸಾಲ (ವೈಯಕ್ತಿಕ) ಯೋಜನೆ Kmdcmicro.karnataka.gov.in**

1. **ವೃತ್ತಿ ಪ್ರೋತ್ಸಾಹ ಯೋಜನೆ (ಪರಿಷ್ಕೃತ)**

ಕೆ.ಎಂ.ಡಿ.ಸಿ ನಿಗಮದ ವತಿಯಿಂದ ಒಟ್ಟು ಸಾಲದ ಮೊತ್ತ ರೂ.1.00 ಲಕ್ಷ (ಒಂದು ಲಕ್ಷ ರೂಪಾಯಿಗಳು) ಅದರಲ್ಲಿ ಶೇ.50ರಷ್ಟು ಸಾಲ ಶೇ.50ರಷ್ಟು ಸಹಾಯಧನದೊಂದಿಗೆ ಅನುಷ್ಠಾನಗೊಳಿಸಲು ಉದ್ದೇಶಿಸಿರುತ್ತದೆ.

2. **ಅರಿವು ಯೋಜನೆ (ಪರಿಷ್ಕೃತ)**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯನ್ನು 2020-21ನೇ ಸಾಲಿನ ಅನ್ವಯವಾಗುವಂತೆ ಹೊಸ (ಫ್ರೆಶ್) ಪ್ರಕರಣಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾದ ವೈದ್ಯಕೀಯ/ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳ ಹೊರತಾಗಿ ಬೇರೆ ಯಾವ ಕೋರ್ಸುಗಳಿಗೂ ಸಾಲವನ್ನು ನೀಡಲಾಗುವುದಿಲ್ಲ. ರಿನ್ಯೂವಲ್ ಪ್ರಕರಣಗಳಲ್ಲಿ ಸರ್ಕಾರಿ ಆದೇಶ ಸಂಖ್ಯೆ MWD 310 MDS 2020 ಬೆಂಗಳೂರು ದಿನಾಂಕ 17/08/2020ರನ್ವಯ ಈ ಕೆಳಕಂಡಂತೆ ಪರಿಷ್ಕರಿಸಿ ಕಾರ್ಯಗತಗೊಳಿಸಲು ಸರ್ಕಾರವು ಆದೇಶಿಸಿರುತ್ತದೆ.

ರಿನ್ಯೂವಲ್ ಸಾಲವನ್ನು ಪರಿಗಣಿಸುವಾಗ ವಿದ್ಯಾರ್ಥಿಯು ಹಿಂದಿನ ವರ್ಷದ/ಹಿಂದಿನ ಸೆಮಿಸ್ಟಾರ್ಗಳ ಪರೀಕ್ಷೆಗಳಲ್ಲಿ ಕನಿಷ್ಟ ಶೇ.65ರಷ್ಟು ಅಂಕಗಳನ್ನು ಎಲ್ಲಾ ವಿಷಯಗಳಲ್ಲೂ ತೇರ್ಗಡೆ ಹೊಂದಿರಬೇಕು. ವಿದ್ಯಾರ್ಥಿಗಳು ಆನ್ ಲೈನ್ ನಲ್ಲಿ ರಿನ್ಯೂವಲ್ ಅರ್ಜಿಯನ್ನು ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷಗಳಲ್ಲಿ ಪಡೆದಿರುವ ಒಟ್ಟು ಸಾಲದ ಬಾಕಿಯ ಮೊತ್ತದ ಶೇ.12 ರಷ್ಟುನ್ನು ಜಿಲ್ಲಾ ಕಛೇರಿಗಳಲ್ಲಿ ಪಾವತಿಸಿರಬೇಕು.

1. ಸಿ.ಇ.ಟಿ/ನೀಟ್ ಇಂದ ಆಯ್ಕೆಯಾದ ವೈದ್ಯಕೀಯ ಪದಿ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಶೇ.50% ಗರಿಷ್ಟ ರೂ.2.00 ಲಕ್ಷಗಳವರೆಗೆ

2. ಸಿ.ಇ.ಟಿ/ನೀಟ್ ಇಂದ ಅಂದರೆ ಡೆಂಟಲ್, ಎಂ.ಬಿಎ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದ ಶೇ.50% ಗರಿಷ್ಟ ರೂ.30,000/- (ರಿನ್ಯೂವಲ್ ಸಹಿತ)

3. ಸಿ.ಇ.ಟಿ ಇಂದ ಅಂದರೆ ಇಂಜಿನಿಯರಿಂಗ್ ಎಂ.ಟೆಕ್, ಎಂ.ಸಿ.ಎ, ಬಿ.ಎಸ್.ಸಿ (ಎ.ಜಿ) ಅಯುರ್ವೇದ, ಐ.ಎಸ್.ಎಂ.ಹೆಚ್., ಡಿ.ಫಾರ್ಮ್, ಬಿ.ಫಾರ್ಮ ಮತ್ತು ಇತರೆ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಬೋಧನಾ ಶುಲ್ಕದ ಶೇ.50% ಗರಿಷ್ಟ ರೂ.30,000/-

4. ಇತರೆ ಡಿಗ್ರಿ, ಡಿಪ್ಲೋಮಾ ಮತ್ತು ಐಟಿಐ ಕೋರ್ಸುಗಳಿಗೆ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಹೊಸ (ಫ್ರೆಶ್)

ಪ್ರಕರಣಗಳಿಗೆ ಬೋಧನಾ ಶುಲ್ಕ ಇರುವುದಿಲ್ಲ ರಿನ್ಯೂವಲ್ ಪ್ರಕರಣಗಳಿಗೆ ಮಾತ್ರ ರೂ.10,000/- ಗರಿಷ್ಟ.

**3. ಗಂಗಾ ಕಲ್ಯಾಣ ಯೋಜನೆ:-**

**ಅ) ಏತ ನೀರಾವರಿ ಯೋಜನೆ**

ಈ ಯೋಜನೆಯಡಿಯಲ್ಲಿ ನಿರಂತರವಾಗಿ ಹರಿಯುತ್ತಿರುವ ನೀರನ್ನು (ನದಿ) ಪೈಪ್ ಲೈನ್ ಮೂಲಕ ಮೇಲಕ್ಕೆ ಎತ್ತಿ, ಕೃಷಿ ಜಮೀನಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲಾಗುತ್ತದೆ. ಈ ಯೋಜನೆಯನ್ನು ನಿಗಮವು ಅನುಷ್ಠಾನಗೊಳಿಸಿ ನಂತರ ಅದನ್ನು ಫಲಾನುಭವಿಗಳ ಗ್ರಾಹಕರ ಸಹಕಾರ ಸಂಘಕ್ಕೆ ಹಸ್ತಾಂತರ ಮಾಡಲಾಗುವುದು. ಉತ್ತಮ ಬೆಳೆ ಪಡೆಯುವ ಸಲುವಾಗಿ ಕೃಷಿ ತಜ್ಞರಿಂದ ಸಲಹೆ ಮತ್ತು ನೆರವನ್ನು ಕೊಡಿಸಲಾಗುವುದು. ಈ ಯೋಜನೆಯು ಸಂಪೂರ್ಣ ಸಹಾಯಧನ ಯೋಜನೆಯಾಗಿದೆ. ಅರ್ಜಿದಾರರು ವೆಬ್ಪೇಜ್ ಮೂಲಕ ಆನ್-ಲೈನ್ ಅರ್ಜಿಯನ್ನು ಸಲ್ಲಿಸಬೇಕು.

**ಆ) ವೈಯಕ್ತಿಕ ಕೊಳವೆಬಾವಿ ಯೋಜನೆ**

ಗ್ರಾಮೀಣ ಪ್ರದೇಶದಲ್ಲಿ ಎಲ್ಲೆಲ್ಲಿ ಹರಿಯುವ ನೀರಿನ ವ್ಯವಸ್ಥೆ ಲಭ್ಯವಿರುವುದಿಲ್ಲವೋ ಅಂತಹ ಸ್ಥಳದಲ್ಲಿ ತಜ್ಞ ಭೂವಿಜ್ಞಾನಿ ಮೂಲಕ ಗುರುತಿಸಲ್ಪಟ್ಟ ಜಲಬಿಂದು ವ್ಯಾಪ್ತಿಯೊಳಗೆ ನೆಲದಡಿಯಲ್ಲಿ ಕೊಳವೆಬಾವಿಯನ್ನು ಕೊರೆದು, ನಂತರ ನೀರು ಸಂಗ್ರಹಿಸಲು ಟ್ಯಾಂಕ್‌ನ್ನು ನಿರ್ಮಿಸಿಕೊಟ್ಟು, ಅದಕ್ಕೆ ಅಳವಡಿಸಿದ ಪೈಪ್ ಮೂಲಕ ಕೃಷಿ ಭೂಮಿಗೆ ನೀರನ್ನುಒದಗಿಸಲಾಗುತ್ತದೆ. ಈ ಯೋಜನೆಯು ಸಂಪೂರ್ಣ ಸಹಾಯಧನ ಯೋಜನೆಯಾಗಿದೆ. ಈ ಯೋಜನೆಯಡಿಯಲ್ಲಿ 01 ಎಕರೆ 20 ಗುಂಟೆಯಿಂದ 5 ಎಕರೆ ಭೂಮಿಯನ್ನು ಹೊಂದಿರುವ ಫಲಾನುಭವಿಗೆ ಒಂದು ಕೊಳವೆಬಾವಿ ಕೊರೆಯಿಸಿ ಅಥವಾ ತೆರೆದ ಬಾವಿಯನ್ನು ನಿರ್ಮಿಸಿ, ಅದಕ್ಕೆ ನಿಗಮದಿಂದ ಪಂಪ್‌ಸೆಟ್‌ನ್ನು ಅಳವಡಿಸಲಾಗುವುದು. ಪಂಪ್‌ಸೆಟ್ ಮತ್ತು ವಿದ್ಯುದ್ದೀಕರಣ ಸೇರಿ ಒಟ್ಟು ವೆಚ್ಚ ರೂ.1.50 ಲಕ್ಷವಾಗಿದೆ. ಅರ್ಜಿದಾರರು ವೆಬ್ಪೇಜ್ ಮೂಲಕ ಆನ್-ಲೈನ್ ಅರ್ಜಿಯನ್ನು ಸಲ್ಲಿಸಬೇಕು.

**ಅರ್ಹತೆ:**

1.ಸರ್ಕಾರಿ ಆದೇಶದಲ್ಲಿ ಸೂಚಿಸಿರುವಂತೆ ಫಲಾನುಭವಿಯು ಮತೀಯ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿರಬೇಕು.

2.ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

3.ಅವರು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು.

4. ವಾರ್ಷಿಕ ಕೌಟುಂಬಿಕ ಆದಾಯ ಗ್ರಾಮೀಣ ಪ್ರದೇಶಗಳಲ್ಲಿ ರೂ.81,000/ಗಳು ಹಾಗೂ ನಗರ ಪ್ರದೇಶಗಳಲ್ಲಿ ರೂ.1.03 ಲಕ್ಷಗಳನ್ನು ಮೀರಿಬಾರದು.

5.ಅರ್ಜಿದಾರರು 'ಆಧಾರ್' ಕಾರ್ಡ್, ಚುನಾವಣಾ ಗುರುತಿನ ಚೀಟಿ, ಪಡಿತರ ಚೀಟಿಯನ್ನು ಹೊಂದಿರಬೇಕು

6.ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು

**ಇ) ತೆರದ ಬಾವಿ**

ವೈಯಕ್ತಿಕ ಕೊಳವೆಬಾವಿ ಕೊರೆಯಲು ಸಾಧ್ಯವಾಗದ ಸಂದರ್ಭದಲ್ಲಿ ಅಂದರೆ ಮಳೆ ಅಡ್ಡಿ ಪಡಿಸುವಿಕೆ, ಜಮೀನಿನಲ್ಲಿ ನಿಂತಿರುವ ಬೆಳೆಗಳು ಮುಂತಾದ ಸಂದರ್ಭಗಳಲ್ಲಿ ಹಾಗೂ ಇತರೆ ಸಂದರ್ಭಗಳಲ್ಲಿ ತೆರದ ಬಾವಿ ಕಾಮಗಾರಿಕೆಯನ್ನು ಜಿಲ್ಲಾ ವ್ಯವಸ್ಥಾಪಕರು ಫಲಾಪೇಕ್ಷಿಯ ಅಪೇಕ್ಷೆ ಮೇರೆಗೆ ನಿಗಮದ ನಿಯಮಾನುಸಾರ ಅರ್ಜಿ ಹಾಗೂ ದಾಖಲಾತಿಗಳನ್ನು ಪಡೆದು ಸಂಬಂಧಪಟ್ಟ ಮತ ಕ್ಷೇತ್ರದ ಮಾನ್ಯ ಶಾಸಕರ ಅನುಮೋದನೆ ಪಡೆದು ಪ್ರಸ್ತಾವನೆಯನ್ನು ಕೇಂದ್ರ ಕಛೇರಿಗೆ ಸಲ್ಲಿಸುವರು.

ವೈಯಕ್ತಿಕ ಕೊಳವೆ ಬಾವಿ ಯೋಜನೆಗೆ ಸರ್ಕಾರವು ರೂ.2.00ಲಕ್ಷಗಳನ್ನು ನಿಗದಿಪಡಿಸಿರುತ್ತದೆ.ಈ ಮೊತ್ತದಲ್ಲಿ ಕೊಳವೆ ಬಾವಿಯ ಕೊರೆಯುವಿಕೆ, ಪಂಪ್‌ಸೆಟ್ಸ್ ಸರಬರಾಜು ಮತ್ತು ವಿದ್ಯುದ್ದೀಕರಣದ ಠೇವಣಿ ಮೊತ್ತವನ್ನು ಭರಿಸಲಾಗುತ್ತದೆ. ಈ ಯೋಜನೆ ಅಡಿಯಲ್ಲಿ ರೂ.2,00,000/-ಗಳು ಸಹಾಯಧನ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು ಜಿಲ್ಲೆಗೆ ಸಹಾಯಧನ ರೂ.3.50 ಲಕ್ಷಗಳು ವಾಗಿರುತ್ತದೆ.

ಈ ಸೌಲಭ್ಯ ಪಡೆಯಬಯಸುವ ಫಲಾನುಭವಿಗಳು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು ಅಂದರೆ ಪ್ರತಿ ಫಲಾನುಭವಿಗೆ 1ಎಕರೆ 20ಗುಂಟೆ (1 ಎಕರೆ50ಸೆಂಟ್ಸ್) ಎಕರೆಯಿಂದು 5 ಎಕರೆಯವರೆಗೆ ಕುಷ್ಕಿ ಜಮೀನಿರಬೇಕು ಮತ್ತು ವ್ಯವಸಾಯ ವೃತ್ತಿಯನ್ನೇ ಅವಲಂಬಿಸಿರಬೇಕು.ಸರ್ಕಾರಿ ಆದೇಶ ಸಂಖ್ಯೆ:ಸಕಇ 168 ಬಿಎಮೆಸ್2010 ದಿನಾಂಕ 25-07-2011ರಲ್ಲಿ ಸೂಚಿಸಿರುವಂತೆ ಮಡಿಕೇರಿ, ಮಂಗಳೂರು, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಇಂತಹ ಜಿಲ್ಲೆಗಳಲ್ಲಿ ಜಮೀನನ ಲಭ್ಯತೆ ಬಹಳ ಕಡಿಮೆ ಇರುವುದರಿಂದ ಗರಿಷ್ಠ 1 ಎಕರೆ ಜಮೀನನ್ನು ಹೊಂದಿರತಕ್ಕದ್ದು. ಅಭ್ಯರ್ಥಿಗಳಿಂದ ಸ್ವಯಂ ಲಿಖಿತ ಅರ್ಜಿ 3 ಭಾವಚಿತ್ರ, ವಾರ್ಷಿಕ ಆದಾಯ ಪ್ರಮಾಣ ಪತ್ರ, ಆಧಾರಕಾರ್ಡ್/ಚುನಾವಣ ಗುರುತಿನ ಚೀಟಿ/ರೇಷನ್ ಕಾರ್ಡ್ ನಕಲು, ಪಹಣಿ, ರೆಕಾರ್ಡ್ ಆಫ್ ರೈಟ್ಸ್ ಪಡೆದು ಆಯ್ಕೆ ಸಮಿತಿಯಲ್ಲಿ ಮಂಡಿಸಿ ನಿಗದಿಪಡಿಸಿದ ಗುರಿಗೆ ಅನುಗುಣವಾಗಿ ಫಲಪೇಕ್ಷಿಗಳನ್ನು ಆಯ್ಕೆ ಮಾಡತಕ್ಕದ್ದು.ಕೇಂದ್ರ ಕಛೇರಿಯ ಲಿಖಿತ

ಅನುಮತಿ ಇಲ್ಲದೆ ಗುರಿಗಿಂತ ಹೆಚ್ಚಿಗೆ ಫಲಪೇಕ್ಷಿಗಳನ್ನು ಆಯ್ಕೆ ಮಾಡಿ ಪಟ್ಟಿ ಕಳುಹಿಸಿದರೆ ತಮ್ಮ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು.

ಈಗಾಗಲೇ ಅಂದರೆ ಕಳೆದ ವರ್ಷದಲ್ಲಿ ಕೇಂದ್ರ ಕಛೇರಿಯಿಂದ ನಿಗದಿಪಡಿಸಿದ ಗುರಿಗಿಂತ ಹೆಚ್ಚಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ವಿಧಾನಸಭಾ ಮತಕ್ಷೇತ್ರದ ಮಾನ್ಯ ಶಾಸಕರ ನೇತೃತ್ವದ ಆಯ್ಕೆ ಸಮಿತಿಯಲ್ಲಿ ಮಂಡಿಸಿ ಇವರುಗಳಿಗೆ ನೀರಾವರಿ ಸೌಲಭ್ಯವನ್ನು ಒದಗಿಸದೇ ಇರುವುದರ ಕಾರಣ ಇವರುಗಳಿಗೆ ಮೊದಲನೇ ಆದ್ಯತೆ ನೀಡಿ 2020-21ನೇ ಸಾಲಿನಲ್ಲಿ ಕೊಳವೆಬಾವಿ ಕೊರೆಯಿಸಲು ತಿಳಿಸಲಾಗಿದೆ. ಯಾವುದೇ ಕಾರಣಕ್ಕೂ ನಿಗಮದಿಂದ ನಿಗದಿಪಡಿಸಿರುವ ಗುರಿಗಿಂತ ಹೆಚ್ಚಿಗೆ ಪ್ರಸ್ತಾವನೆಯನ್ನು ಕಳುಹಿಸಬಾರದಾಗಿ ತಿಳಿಸಲಾಗಿದೆ.

ಗುರಿಗಿಂತ ಹೆಚ್ಚಾಗಿ ಪ್ರಸ್ತಾವನೆಗಳನ್ನು ಸಲ್ಲಿಸಿದ್ದಲ್ಲಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳೇ ಹೊಣೆಗಾರರಾಗಿರುತ್ತಾರೆ. ಸದರಿ ಅಂಶವನ್ನು ಸಂಭಂದಿಸಿದ ಮತಕ್ಷೇತ್ರದ ಮಾನ್ಯ ಅಧ್ಯಕ್ಷರ (ಶಾಸಕರು)ರವರ ಗಮನಕ್ಕೆ ಮಾಹಿತಿಯನ್ನು ಸಲ್ಲಿಸತಕ್ಕದ್ದು.

**4. ಶ್ರಮಶಕ್ತಿ ಯೋಜನೆ**

ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವರ್ಗದ ಕುಲಕಸುಬುದಾರರಿಗೆ ತರಬೇತಿ ನೀಡಿ, ಅವರು ತಮ್ಮ ಕಲಾತ್ಮಕ ಮತ್ತು ತಾಂತ್ರಿಕ ಕೌಶಲ್ಯವನ್ನು ವೃದ್ಧಿಸಿಕೊಂಡು ಅದೇ ಕಸುಬನ್ನು ಮುಂದುವರೆಸಲು ಅಥವಾ ಸಣ್ಣ ವ್ಯಾಪಾರವನ್ನು ಪ್ರಾರಂಭಿಸಲು ಅಥವಾ ಅಭಿವೃದ್ಧಿಗೊಳಿಸುವ ಸಲುವಾಗಿ, ನಿಗಮದಿಂದ ಕಡಿಮೆ ಬಡ್ಡಿದರದಲ್ಲಿ ರೂ.50,000/-ದವರೆಗೆ ಸಾಲಸೌಲಭ್ಯವನ್ನು ಕಲ್ಪಿಸಲಾಗುತ್ತದೆ. ಇದರಲ್ಲಿ, ಶೇ.೫೦ರಷ್ಟು ಸಾಲವನ್ನು 36 ತಿಂಗಳಿನಲ್ಲಿ ಫಲಾನುಭವಿಯು ಮರುಪಾವತಿ ಮಾಡಿದಲ್ಲಿ, ಉಳಿದ ಶೇ.50ರಷ್ಟು ಹಣವನ್ನು 'ಬ್ಯಾಕ್‌ಎಂಡ್ ಸಹಾಯಧನ' ವನ್ನಾಗಿ ಪರಿಗಣಿಸಲಾಗುತ್ತದೆ.ಫಲಾನುಭವಿಯು ತಾನು ಪಡೆದ ಸಾಲವನ್ನು 36 ತಿಂಗಳೊಳಗಾಗಿ ಮರುಪಾವತಿ ಮಾಡಲು ವಿಫಲನಾದಲ್ಲಿ, ಶೇ.50ರಷ್ಟು ಬ್ಯಾಕ್‌ಎಂಡ್ ಸಹಾಯಧನವನ್ನು ಸಹ ಸಾಲವೆಂದು ಪರಿಗಣಿಸಲಾಗುತ್ತದೆ.

**5. ಸಣ್ಣ (ಮೈಕ್ರೋ) ಸಾಲ ಹಾಗೂ ಸಹಾಯಧನ ಯೋಜನೆ**

ಈ ಯೋಜನೆಯನ್ನು ಸ್ವ-ಸಹಾಯ ಗುಂಪಿನ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಅಂತಹ ಸಂಘಟಿತ ಗುಂಪು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ 10 ರಿಂದ 20 ಸದಸ್ಯರನ್ನು ಹೊಂದಿದ್ದು, ಅದರ ಸದಸ್ಯರು ಹಣಕಾಸು ಮಿತವ್ಯಯ ಚಟುವಟಿಕೆಯಲ್ಲಿ(thrift activity) ತೊಡಗಿಸಿಕೊಳ್ಳುವ ಉದ್ದೇಶವನ್ನು ಹೊಂದಿರಬೇಕು. ಅಂತಹ ಸಂಘದ ಸದಸ್ಯರು ತಮ್ಮಲ್ಲಿ ಇಬ್ಬರನ್ನು ಪ್ರತಿನಿಧಿ-01

ಮತ್ತು ಪ್ರತಿನಿಧಿ-02 ಆಗಿ ಆಯ್ಕೆಮಾಡಿಕೊಂಡಿರಬೇಕು.ಅAತಹ ಪ್ರತಿನಿಧಿಗಳು ಸ್ವ-ಸಹಾಯ ಗುಂಪಿನ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು ಬ್ಯಾಂಕಿನಿAದ ತಮ್ಮನ್ನು 'ಅಧಿಕೃತ ರುಜುದಾರರು' ಎಂಬ ಮಾನ್ಯತೆ ಪಡೆದಿರಬೇಕು.ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಮಹಿಳೆಯರು ರೂಪಿಸಿಕೊಂಡ ಸ್ವ-ಸಹಾಯ ಗುಂಪಿಗೆ ಪ್ರಾಶಸ್ತ್ರಂಯ ಕೊಡಲಾಗುವುದು. ರಾಜ್ಯದ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ನೆಲೆಸಿರುವ ಅಲ್ಪಸಂಖ್ಯಾತರು ಪ್ರಾರಂಭಿಸಬಯಸುವ ಸಣ್ಣ ವ್ಯಾಪಾರ ಅಂದರೆ, ತಳ್ಳುವ ಗಾಡಿಯಲ್ಲಿ ತರಕಾರಿ/ಹಣ್ಣು ಮಾರಾಟ, ಕಲಾಯಿ ಮಾಡುವಿಕೆ, ಹಾಸಿಗೆ ಮಾಡುವಿಕೆ, ಪಾನ್ ಶಾಪ್, ಕಡ್ಲೆಕಾಯಿ ವ್ಯಾಪಾರ, ಸೈಕಲ್ ರಿಪೇರಿ, ಗ್ಯಾಸ್/ಆರ್ಕ್ ವೆಲ್ಡಿಂಗ್, ವಲ್ಕನೈಸಿಂಗ್, ಮೀನು ಮಾರಾಟ, ಟೀ ಶಾಪ್ ಮುಂತಾದುವುಗಳಿಗೆ ನಿಗಮವು ಪ್ರತಿ ಸದಸ್ಯನಿಗೆ ರೂ.10,000/- ಸಾಲ ಸೌಲಭ್ಯವನ್ನು (ರೂ.5,000/- ಸಾಲ ಮತ್ತು ರೂ.5,000/- ಸಹಾಯಧನ) ನೀಡುತ್ತದೆ. ನಿಗಮದಿಂದ ಸಾಲವನ್ನು ಸ್ವ-ಸಹಾಯ ಗುಂಪಿಗೆ ನೇರವಾಗಿ ಮಂಜೂರು ಮಾಡಲಾಗುವುದು.ನಂತರ ಅಂತಹ ಸ್ವ-ಸಹಾಯ ಗುಂಪು, ತಮ್ಮ ಸದಸ್ಯರಿಗೆ ಸಾಲವನ್ನು ಬಿಡುಗಡೆ ಮಾಡುಬೇಕು.ಸಾಲವನ್ನು ಶೇ.5ರ ಬಡ್ಡಿದರದಲ್ಲಿ 36 ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗುತ್ತದೆ.

**6. ಮೈಕ್ರೋಸಾಲಯೋಜನೆ(ವೈಯಕ್ತಿಕ) ಮಹಿಳೆಯರಿಗೆ ಮಾತ್ರ (2020-21 ನೇಸಾಲಿಗೆಮಾತ್ರ)**

-------------------------------

ಕೋವಿಡ್-19 ಪಿಡುಗಿ ನಿಂದಾಗಿ ತೊಂದರೆ ಗೊಳಗಾದ, ನಿಗಮದ ಯಾವುದೇ ಯೋಜನೆಯಲ್ಲೂ ಇದುವರೆಗೆಸಾಲ,ಸಹಾಯಧನ ಯಾವುದನ್ನೂ ಪಡೆಯದ ಕಡುಬಡತನದಲ್ಲಿರುವ ಅಲ್ಪಸಂಖ್ಯಾತ ಸಮುದಾಯದ 23,000 ಬಿಪಿಎಲ್ ಕಾರ್ಡ್ ಹೊಂದಿರುವ 25 ರಿಂದ 50 ವಯೋಮಾನದೊಳಗಿನ ಮಹಿಳೆಯರಿಗೆ, ತಳ್ಳುವಗಾಡಿಯಲ್ಲಿ ವ್ಯಾಪಾರ, ಬೀದಿವ್ಯಾಪಾರ, ಜಾತ್ರೆಗಳಲ್ಲಿ ವ್ಯಾಪಾರ, ಕಿರಾಣಿ ಅಂಗಡಿ, ಅರಿಷಿನ / ಕುಂಕುಮ/ ಅಗರಬತ್ತಿ/ ಕರ್ಪೂರ, ಪಾದಚಾರಿ ಮಾರ್ಗದಲ್ಲಿ, ಟೀ / ಕಾಪಿಮಾರಾಟ, ಎಳನೀರು ವ್ಯಾಪಾರ, ಹೂವಿನ ವ್ಯಾಪಾರ, ತರಕಾರಿ ವ್ಯಾಪಾರ, ಹಣ್ಣಿನ ವ್ಯಾಪಾರ, ಇನ್ನಿತರ ಸಣ್ಣ ವ್ಯಾಪಾರ ನಡೆಸಲು ಆರಂಭಿಕ ಬಂಡವಾಳಕ್ಕಾಗಿ ರೂ.10,000/-ಮೊತ್ತದ (ರೂ.8000/-ಸಾಲ +ರೂ.2,000/-ಸಬ್ಸಿಡಿ) ಅಲ್ಪಾವಧಿ ಸಾಲ ಯೋಜನೆ ಇದು.

**7. ಗೃಹ ನಿರ್ಮಾಣ ಮಾರ್ಜಿನ್ ಹಣ ಸಾಲದ ಯೋಜನೆ**

ಈ ಯೋಜನೆಯಡಿಯಲ್ಲಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಅಂದರೆ ರಾಜೀವ್‌ಗಾಂಧಿ ಗೃಹ ನಿರ್ಮಾಣ ನಿಗಮ, ಕರ್ನಾಟಕ ಗೃಹ ಮಂಡಳಿ, ಕೊಳಚೆ ನಿರ್ಮೂಲನ ಮಂಡಳಿ ಹಾಗೂ ಇತರೆ ಸರ್ಕಾರಿ ಸ್ವಾಮ್ಯದ ಮೂಲಕ ವಿವಿಧ ಗೃಹ ನಿರ್ಮಾಣ ಯೋಜನೆಗಳ ಅಡಿಯಲ್ಲಿ ಆಯ್ಕೆ ಯಾಗುವ ರಾಜ್ಯದಲ್ಲಿನ ಮತೀಯ

ಅಲ್ಪಸಂಖ್ಯಾತರ ಫಲಾನುಭವಿಗಳಿಗೆ ಗೃಹ ನಿರ್ಮಾಣ ಮಾಡಲು ಗೃಹ ನಿರ್ಮಾಣದ ಘಟಕ ವೆಚ್ಚದ್ವನಯ ನಿಗದಿಪಡಿಸಲಾಗುವ ಫಲಾನುಭವಿಯ ವಂತಿಕೆಯನ್ನು (Beneficaries Contribution)ಗರಿಷ್ಠ ರೂ.1.00 ಲಕ್ಷಗಳವರೆಗೆ ಮಾರ್ಜಿನ್ ಹಣ ಸಾಲವನ್ನಾಗಿ ಶೇ.4ರ ಬಡ್ಡಿದರದಲ್ಲಿ ಫಲಾನುಭವಿಯ ಪರವಾಗಿ ನಿರ್ಮಾಣ ಮಾಡುವ ಸಂಸ್ಥೆಗಳಿಗೆ ಒಡಂಬಡಿಕೆಯ ಮೂಲಕ ಬಿಡುಗಡೆ ಮಾಡಲಾಗುವುದು.

**8.ಪಶುಸಂಗೋಪನೆ ಯೋಜನೆ (ಹಸು, ಕುರಿ, ಮೇಕೆ ಇತ್ಯಾದಿ ಸಾಕುಪ್ರಾಣಿಗಳ ಖರೀದಿಗಾಗಿ ಸಾಲಸೌಲಭ್ಯ) ಮಹಿಳೆಯರಿಗೆ ಮಾತ್ರ**

ಸದರಿ ಯೋಜನೆಯಡಿ ಪ್ರಮುಖವಾಗಿ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವ ಮತೀಯ ಅಲ್ಪಸಂಖ್ಯಾತ ಸಮುದಾಯದ ಮಹಿಳೆಯರು ಹಸು, ಕುರಿ, ಮೇಕೆ ಇತ್ಯಾದಿ ಸಾಕು ಪ್ರಾಣಿಗಳನ್ನು ಖರೀದಿಸಲು ಅಥವಾ ಕೋಳಿ ಸಾಕಾಣಿಕೆ, ಬಾತುಕೋಳಿ ಸಾಕಾಣಿಕೆ, ಉಷ್ಟ್ರಪಕ್ಷಿ ((Ostrich) ಸಾಕಾಣಿಕೆ ಇತ್ಯಾದಿಗಳನ್ನು ಪ್ರಾರಂಭಿಸಲು ಅಥವಾ ಅಭಿವೃದ್ಧಿಗೊಳಿಸಲು ಮತ್ತು ಅವರು ಸತತವಾಗಿ ಆದಾಯ ಗಳಿಸುವ ಸಲುವಾಗಿ ಸಾಲಿಯಾನ ಶೇಕಡ 3 ಬಡ್ಡಿದರದಲ್ಲಿ ರೂ.40,000/-ದ ಘಟಕವೆಚ್ಚದ ಸಾಲಸೌಲಭ್ಯವನ್ನು ನೀಡಲಾಗುತ್ತದೆ. ಇದರಲ್ಲಿ ಶೇ.50 ಸಹಾಯಧನವಾಗಿರುತ್ತದೆ.

**9. ಟ್ಯಾಕ್ಸಿ /ಗೂಡ್ಸ್ ವಾಹನ ಖರೀದಿಗಾಗಿ ಸಹಾಯಧನ ಯೋಜನೆ (ಪರಿಷ್ಕೃತ)**

ಸದರಿ ಯೋಜನೆಯಡಿ ಟ್ಯಾಕ್ಸಿ / ಗೂಡ್ಸ್ ವಾಹನವನ್ನು ಖರೀದಿಸಲು ಪ್ರತಿ ಅರ್ಜಿದಾರರಿಗೆ ರೂ.75,000/- ಸಹಾಯಧನ ನೀಡಲಾಗುತ್ತದೆ. ಬ್ಯಾಂಕ್ ಸಾಲದ ಮೂಲಕ ಟ್ಯಾಕ್ಸಿ / ಗೂಡ್ಸ್ ವಾಹನವನ ಖರೀದಿಸುವ ಅರ್ಜಿದಾರರು ಈ ಸೌಲಭ್ಯವನ್ನು ಪಡೆಯಬಹುದು.

**10. ರೈತರ ಕಲ್ಯಾಣ ಯೋಜನೆ.**

ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರೋತ್ಸಾಹಿಸಲು ಉಳುಮೆಯಿಂದ ಕೊಯ್ಲುವರೆಗೆ ಕೃಷಿ ಸಂಬಂಧಿತ ಉಪಯುಕ್ತ ವಿವಿಧ ಮಾದರಿಯ ಉಪಕರಣಗಳಾದ ಸಣ್ಣ ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣ, ನಾಟಿ/ಬಿತ್ತನೆ ಉಪಕರಣ, ಅಂತರ ಬೇಸಾಯ ಉಪಕರಣ, ಡೀಸಲ್ ಪಂಪ್‌ಸೆಟ್ ಚಿಕ್ಕ ಟ್ರ್ಯಾಕ್ಟರ್/ಟಿಲ್ಲರ್/ಇಂಜಿನ್ ಚಾಲಿತ ಸಸ್ಯ ಸಂರಕ್ಷಣ ಉಪಕರಣಗಳು ಇತ್ಯಾದಿಗಳನ್ನು ರೂ. 1.00 ಲಕ್ಷಗಳ ಘಟಕ್ಕ ವೆಚ್ಚದಲ್ಲಿ ಖರೀದಿಸಲು ಇದರಲ್ಲಿ ಶೇ:50% ರಷ್ಟು ಸಹಾಯಧನದೊಂದಿಗೆ ಸಾಲವನ್ನು ನೀಡಲಾಗುವುದು ಘಟಕ ವೆಚ್ಚವು ರೂ.1.00 ಲಕ್ಷಗಿಂತ ಹೆಚ್ಚಾದಲ್ಲಿ ಫಲಾನುಭವಿಯು ಭರಿಸತಕ್ಕದ್ದು.

**11."ಆಟೋ ಸರ್ವಿಸ್, ಆಟೋ ಮೊಬೈಲ್, ಬಿದರಿ ಮತ್ತು ರೇಷ್ಮೆ, ಚನ್ನಪಟ್ಟಣದ ಕರಕುಶಲ ಚಟುವಟಿಕೆಗಳಿಗೆ ತರಬೇತಿ ಪ್ರೋತ್ಸಾಹ ಮತ್ತು ಮೂಲಭೂತ ಸೌಕರ್ಯ ನೀಡಲಾಗುವುದು."**

ಪ್ರಸ್ತುತ ಆಟೋ ಮೊಬೈಲ್ ಸರ್ವೀಸ್, ಬಿದರಿ ಹಾಗೂ ರೇಷ್ಮೆ ಚಟುವಟಿಕೆಗಳಿಗೆ ಸಂಬಂಧಿಸಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಇವರಿಗೆ ಸರ್ಕಾರದಿಂದ ಮಾನ್ಯತೆ ಪಡೆದ ತರಬೇತಿ ಸಂಸ್ಥೆಗಳಿಂದ ತರಬೇತಿಯನ್ನು ನೀಡಲಾಗುವುದು.

**ಆಟೋಮೊಬೈಲ್ ಸರ್ವಿರ್ಸ್:**

ರಾಜ್ಯದಲ್ಲಿನ ಮತೀಯ ಅಲ್ಪಸಂಖ್ಯಾತ ಅಶಿಕ್ಷಿತ ನಿರುದ್ಯೋಗ ಯುವಕ/ಯುವತಿಯರಿಗೆ ಆಟೋಮೊಬೈಲ್ ಸರ್ವಿಸ್‌ನಲ್ಲಿ ತರಬೇತಿಯನ್ನು ಹಾಗೂ ತರಬೇತಿಯ ನಂತರ ಇವರಿಗೆ ಸ್ವಂತ ಉದ್ಯೋಗ ಕಲ್ಪಿಸಲು ರಾಷ್ಟ್ರೀಕೃತ/ಷೆಡ್ಯೂಲ್/ ಗ್ರಾಮೀಣ ಬ್ಯಾಂಕುಗಳಿಂದ ರೂ.2.00 ಲಕ್ಷಗಳಿಂದ ರೂ.5.00 ಲಕ್ಷವರೆಗೆ ನೀಡಲಾಗುವ ಸಾಲಕ್ಕೆ ನಿಗಮದಿಂದ ಶೇ.35 ರಷ್ಟು ಅಂದರೆ ಕನಿಷ್ಠ ರೂ.70000/-ಗಳಿಂದ ಗರಿಷ್ಠ ರೂ.1.25 ಲಕ್ಷಗಳ ಸಹಾಯಧನ ನೀಡಲಾಗುವುದು.

ಈ ತರಬೇತಿಗಳನ್ನು ಪ್ರತಿಷ್ಠಿತ ಆಟೋಮೊಬೈಲ್ ಸರ್ವಿಸ್ ಸಂಸ್ಥೆಗಳಾದ Toyota,Volvo,TATA,TAFE//ಇತರೆ ಸಂಸ್ಥೆಗಳ ಸಹಯೋಗದೊಂದಿಗೆ ನೀಡಲು ಸೂಚಿಸಲಾಗಿದೆ.

ಜಿಲ್ಲೆಗೆ ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಪ್ರಸ್ತಾವನೆಯನ್ನು ಬ್ಯಾಂಕಿನ ಕ್ಲೈಮ್ ಪತ್ರದ ಜೊತೆಗೆ ಕಮಿಟ್‌ಮೆಂಟ್ ಲೇಟರ್‌ನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು. ಗುರಿಗಿಂತ ಹೆಚ್ಚಿಗೆ ಪ್ರಸ್ತಾವನೆಯನ್ನು ನಿಗಮಕ್ಕೆ ಕಳುಹಿಸಬಾರದು.

**ಬಿದರಿ ಚಟುವಟಿಕೆ:**

ಈ ಕರಕುಶಲ ಚಟುವಟಿಕೆಯು ಬೀದರ್‌ನಲ್ಲಿ ಪ್ರಸಿದ್ಧಿಯನ್ನು ಹೊಂದಿದೆ. ಪ್ರಸ್ತುತ ಈ ಯೋಜನೆಯಡಿಯಲ್ಲಿ ಆಸಕ್ತಿಯುಳ್ಳ ಅರ್ಹ ಫಲಾನುಭವಿಗಳಿಗೆ ತರಬೇತಿಯನ್ನು ಹಾಗೂ ತರಬೇತಿಯ ನಂತರ ಇವರಿಗೆ ಸ್ವಂತ ಉದ್ಯೋಗವನ್ನು ಕಲ್ಪಿಸಲು ರಾಷ್ಟ್ರೀಕೃತ/ಷೆಡ್ಯೂಲ್/ ಗ್ರಾಮೀಣ ಬ್ಯಾಂಕ್‌ಗಳಿಂದ ರೂ.2.00 ಲಕ್ಷಗಳಿಂದ ರೂ.5.00 ಲಕ್ಷದವರೆಗೆ ನೀಡಲಾಗುವ ಸಾಲಕ್ಕೆ ನಿಗಮದಿಂದ ಶೇ.35 ರಷ್ಟು ಅಂದರೆ ಕನಿಷ್ಠ ರೂ.70000/- ಗಳಿಂದ ಗರಿಷ್ಠ ರೂ.1.25 ಲಕ್ಷಗಳ ಸಹಾಯಧನ ನೀಡಲಾಗುವುದು.

ಜಿಲ್ಲೆಗೆ ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಪ್ರಸ್ತಾವನೆಯನ್ನು ಬ್ಯಾಂಕಿನ ಕ್ಲೈಮ್ ಪತ್ರದ ಜೊತೆಗೆ ಕಮಿಟ್‌ಮೆಂಟ್ ಲೇಟರ್‌ನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು.ಗುರಿಗಿಂತ ಹೆಚ್ಚಿಗೆ ಪ್ರಸ್ತಾವನೆಯನ್ನು ನಿಗಮಕ್ಕೆ ಕಳುಹಿಸ ಬಾರದು.

**ಚನ್ನಪಟ್ಟಣದ ಕರಕುಶಲ ಚಟುವಟಿಕೆ:**

ಇದು ಚನ್ನಪಟ್ಟಣದ ಪ್ರಪಂಚದಾದ್ಯಂತ ಪ್ರಸಿದ್ಧಿ ಹೊಂದಿರುವ ಸಾಂಪ್ರದಾಯಿಕ ಕಲೆಯಾಗಿದೆ.ಚನ್ನಪಟ್ಟಣದಲ್ಲಿ ಸಾಂಪ್ರದಾಯಿಕ ಕಲಾವಿದರು ಈ ಚಟುವಟಿಕೆಯನ್ನು ಅವಲಂಬಿಸಿದ್ದಾರೆ.

ಅಲ್ಪಸಂಖ್ಯಾತರ ಸಮುದಾಯದ ಕುಶಲ ಕರ್ಮಿಗಳಿಗೆ ಕರಕುಶಲ ನಿಗಮದಿಂದತರಬೇತಿಯನ್ನು ನೀಡಲು ಸೂಚಿಸಲಾಗಿದೆ. ತರಬೇತಿಯ ನಂತರ ಈ ಕುಶಲಕರ್ಮಿಗಳಿಗೆ ನಿಗಮದಿಂದ ರೂ.1.00 ಲಕ್ಷಗಳ ಸಾಲವನ್ನು ವಾರ್ಷಿಕ ಶೇ.3ರ ಬಡ್ಡಿದರದಲ್ಲಿ ನೀಡಲಾಗುವುದು. ಇದರಲ್ಲಿ ಶೇ.50ರಷ್ಟು ಸಹಾಯಧನವಾಗಿರುತ್ತದೆ.

**ರೇಷ್ಮೆ ಉದ್ಯಮ.**

ಈ ಉದ್ಯಮವು ರಾಮನಗರ ಜಿಲ್ಲೆಯಲ್ಲಿ ಪ್ರಸಿದ್ಧಿಯನ್ನು ಹೊಂದಿದೆ. ಹಲವಾರು ಕುಟುಂಬಗಳು ಈ ಉದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಆರ್ಥಿಕವಾಗಿ ಬಹಳಷ್ಟು ಅವಲಂಬಿತರಾಗಿರುತ್ತಾರೆ. ಸ್ಥಳೀಯ ಮಾರುಕಟ್ಟೆಯಲ್ಲಿ ಈ ಉದ್ಯಮಕ್ಕೆ ಹೆಚ್ಚಿನ ಪ್ರಾಮುಖ್ಯತೆಯಿದೆ.ಈ ಕಾರಣಗಳಿಂದ ಈ ಉದ್ಯಮವನ್ನು ಇನ್ನಷ್ಟು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಬೆಳೆಸುವ ನಿಟ್ಟಿನಲ್ಲಿ ಅವಲಂಬಿತರಾಗಿರುವ ಹಲವಾರು ಅಲ್ಪಸಂಖ್ಯಾತ ಫಲಾನುಭವಿಗಳಿಗೆ ಮತ್ತು ಯುವಕ /ಯುವತಿಯರಿಗೆ ಉತ್ತೇಜನ ನೀಡಲಾಗುವುದು.

ಈ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳಿಗೆ ಕರ್ನಾಟಕ ಸರ್ಕಾರದ ರೇಷ್ಮೆ ಇಲಾಖೆ/ಕರ್ನಾಟಕ ಸರ್ಕಾರದ ನೊಂದಾಯಿತ ರೇಷ್ಮೆ ಚಟುವಟಿಕೆ ಸಂಸ್ಥೆಗಳಿಂದ ತರಬೇತಿಯನ್ನು ನೀಡಲು ಸೂಚಿಸಲಾಗಿದೆ.ತರಬೇತಿಯ ನಂತರ ಈ ಕುಶಲಕರ್ಮಿಗಳಿಗೆ ನಿಗಮದಿಂದ ರೂ.1.00 ಲಕ್ಷಗಳ ಸಾಲವನ್ನು ವಾರ್ಷಿಕ ಶೇ.3ರ ಬಡ್ಡಿದರದಲ್ಲಿ ನೀಡಲಾಗುವುದು.ಇದರಲ್ಲಿ ಶೇ.50ರಷ್ಟು ಸಹಾಯಧನವಾಗಿರುತ್ತದೆ.

**12. ಮನೆ ಮಳಿಗೆ ಯೋಜನೆ:**

ಈ ಯೋಜನೆಯನ್ನು ಕೆಳಕಂಡ ಎರಡು ವಿಭಾಗಗಳ ರಾಜ್ಯದ ಅಲ್ಪಸಂಖ್ಯಾತ ವಿಶೇಷ ಹಾಗೂ ದುರ್ಬಲ ವರ್ಗದ ಫಲಾನುಭವಿಗಳಿಗೆ ಇವರ ಆರ್ಥಿಕ ಮಟ್ಟವನ್ನು ಉತ್ತಮಗೊಳಿಸಲು ಹಾಗೂ ಈ ವರ್ಗದವರು ಸ್ವಾಲಂಭಿಗಳಾಗಿ ಬದುಕುವ ನಿಟ್ಟಿನಲ್ಲಿ ಆರ್ಥಿಕ ಸಬಲರಾನ್ನಾಗಿಸಲು ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. (ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 56 ಎಂಡಿಸಿ 2017 ಬೆಂಗಳೂರು, ದಿನಾಂಕ 02/06/2017

ರಾಜ್ಯದಲ್ಲಿ ಕೋಮು ಗಳಭೆ ಮತ್ತು ಕೋಮು ಹಿಂಸಾಚಾರದ ಸಂಬರ್ಧಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿ ಜೀವನೋಪಾಯವನ್ನು ಸಾಧಿಸಲು ಸಾಧ್ಯವಾಗದ

ಅಲ್ಪಸಂಖ್ಯಾತ ಸಮುದಾಯದ ಫಲಾನುಭವಿಗಳಿಗೆ ಪ್ರಾರಂಭಿಸಲು ಸಾಲ ಸೌಲಭ್ಯವನ್ನು ನೀಡಲಾಗುವುದು.

ಸನ್ನಡತೆ ಆಧಾರದ ಮೇಲೆ ಕಾರಾಗೃಹ ವಾಸದಿಂದ ಬಿಡುಗಡೆಯಾದ ಖೈದಿಗಳಿಗೆ, ಭಯೋತ್ಪಾದಕ ವಿರೋಧಿ ಚಟುವಟಿಕೆ, ಗೂಂಡಾ ಕಾಯಿದೆಯಡಿ ಬಂಧಿತರಾಗಿ ಪ್ರಕರಣಗಳು ಸಾಬೀತಾಗದೇ ನ್ಯಾಯಾಲಯದಿಂದ ಬಿಡುಗಡೆಯಾದ ನಿರಾಪರಾಧಿಗಳಿಗೆ ಹಾಗೂ ವಿವಿಧ ಸುರಕ್ಷತೆ ಕಾಯಿದೆಯಡಿ ಬಂಧಿತರಾಗಿ ಹಲವಾರು ವರ್ಷಗಳ ನಂತರ ನ್ಯಾಯಾಲಯದಿಂದ ಬಿಡುಗಡೆಯಾದ ನಿರಪರಾಧಿಗಳು ಇವರಿಗೆ ಜೀವನೋಪಾಯವನ್ನು ಕಲ್ಪಿಸಲು ಇಂತಹ ಅಲ್ಪಸಂಖ್ಯಾತರ ವರ್ಗದವರನ್ನು ಗುರುತಿಸಿ ಸಾಲ ಸೌಲಭ್ಯವನ್ನು ನೀಡಿ ಇವರ ಜೀವನವನ್ನು ಉತ್ತಮಗೊಳಿಸಲು ಉದ್ದೇಶಿಸಲಾಗಿದೆ.

**ಸಾಲ ಸೌಲಭ್ಯದ ವಿವರ:**

ಮೇಲ್ಕಂಡಂತೆ 2 ವರ್ಗಗಳ ರಾಜ್ಯದಲ್ಲಿನ ವಿಶೇಷ/ದುರ್ಬಲವರ್ಗದ ಫಲಾನುಭವಿಗಳಿಗೆ ಗರಿಷ್ಠ 5 ಲಕ್ಷಗಳ ಘಟಕ ವೆಚ್ಚಕ್ಕೆ ಶೇ.50ರಷ್ಟು ಸಹಾಯಧನ ಮತ್ತು 3ರಬಡ್ಡಿದರದಲ್ಲಿ ಶೇ.50ರಷ್ಟು ಸಾಲವನ್ನು ನೀಡಲಾಗುವುದು.

## 13. ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮ (ಎನ್.ಎಂ.ಡಿ.ಎಫ್.ಸಿ)

ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮವು (ದೆಹಲಿ) ದಿನಾಂಕ 30.09.1994ರಲ್ಲಿ ಸ್ಥಾಪಿತಗೊಂಡಿದ್ದು, ಮತೀಯ ಅಲ್ಪಸಂಖ್ಯಾತ ಸಮುದಾಯಗಳಿಗೆ ಸೇರಿದ ಕಡುಬಡವರ ಆರ್ಥಿಕಾಭಿವೃದ್ಧಿಯನ್ನು ಗುರಿಯಾಗಿರಿಸಿಕೊಂಡು ಮತ್ತು ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲು ರಾಜ್ಯ ವಿತರಣಾ ಸಂಸ್ಥೆಗಳ (ಎಸ್.ಸಿ.ಎ) ಮೂಲಕ ವಿವಿಧ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು ಕರ್ನಾಟಕದಲ್ಲಿ ಎನ್.ಎಂ.ಡಿ.ಎಫ್.ಸಿ.ಯ ರಾಜ್ಯ ವಿತರಣಾಸಂಸ್ಥೆಯಾಗಿರುತ್ತದೆ. ಎನ್.ಎಂ.ಡಿ.ಎಫ್.ಸಿ.ಯ ಕೆಳಕಂಡ ಯೋಜನೆಗಳಡಿಯಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು ಅರ್ಹ ಫಲಾನುಭವಿಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲಸೌಲಭ್ಯವನ್ನು ನೀಡುತ್ತಿದೆ:

**ಅವಧಿ ಸಾಲ ಯೋಜನೆ**

ಸದರಿ ಯೋಜನೆಯು ಏಕವ್ಯಕ್ತಿಪರ (Individual) ಯೋಜನೆಯಾಗಿದ್ದು, ಕ್ರೆಡಿಟ್ ಲೈನ್-1ರ ನಿಯಮಾವಳಿಯನ್ವಯ ಪ್ರತಿ ಫಲಾನುಭವಿಗೆ ವ್ಯಾಪಾರ/ಆರ್ಥಿಕ

ಚಟುವಟಿಕೆಗಳಿಗಾಗಿ ರೂ.50,000/- ದಿಂದ ರೂ.20.00 ಲಕ್ಷದವರೆಗೆ ಸಾಲಿಯಾನ ಶೇ.6ರ ಬಡ್ಡಿ ದರದಲ್ಲಿ ಸಾಲಸೌಲಭ್ಯ ನೀಡಲಾಗುತ್ತದೆ. ಹಾಗೆಯೇ, ಕ್ರೆಡಿಟ್ ಲೈನ್-2ರ ನಿಯಮಾವಳಿಯನ್ವಯ ಪ್ರತಿ ಫಲಾನುಭವಿಗೆ ರೂ.30.00 ಲಕ್ಷದವರೆಗೆ ಪುರುಷರಿಗೆ ಸಾಲಿಯಾನ ಶೇ.8ರ ಬಡ್ಡಿ ದರದಲ್ಲಿ ಮತ್ತು ಮಹಿಳೆಯರಿಗೆ ಶೇ.6ರ ಬಡ್ಡಿ ದರದಲ್ಲಿ ಸಾಲಸೌಲಭ್ಯ ನೀಡಲಾಗುತ್ತದೆ. ಒಟ್ಟುಸಾಲದಲ್ಲಿ ಎನ್.ಎಂ.ಡಿ.ಎಫ್.ಸಿ.ಯ ಪಾಲು ಶೇ.90, ಕೆ.ಎಂ.ಡಿ.ಸಿ.ಯ ಪಾಲು ಶೇ.5 ಆಗಿದ್ದು, ಇನ್ನುಳಿದ ಶೇ.5ರಷ್ಟು ವಂತಿಕೆಯನ್ನು ಫಲಾನುಭವಿಯು ಭರಿಸಬೇಕಾಗುತ್ತದೆ. ಫಲಾನುಭವಿಯು ಸಾರಿಗೆ ಕ್ಷೇತ್ರದಲ್ಲಿ ಸಾರಿಗೆ ವಾಹನವನ್ನು ಕೊಳ್ಳಲು ಸಹ ನಿಗಮವು ಸಾಲ ಸೌಲಭ್ಯವನ್ನು ನೀಡುತ್ತದೆ. ಫಲಾನುಭವಿಯು ಸಾಲವನ್ನು 36/60 ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗುತ್ತದೆ. ನಿಗಮವು ಮಂಜೂರು ಮಾಡುವ ಅವಧಿ ಸಾಲಕ್ಕಾಗಿ ಫಲಾನುಭವಿಯು ಸ್ಥಿರಾಸ್ತಿಯನ್ನು ಅಡಮಾನ ಮಾಡಬೇಕಾಗುತ್ತದೆ.

## ಮೈಕ್ರೋ ಫೈನಾನ್ಸ್ ಯೋಜನೆ

ರಾಜ್ಯ ಸರ್ಕಾರ ಪ್ರಾಯೋಜಿತ ಸಣ್ಣ (ಮೈಕ್ರೋ) ಸಾಲ ಯೋಜನೆಯ ಮಾದರಿಯಲ್ಲಿಯೇ, ನಿಗಮವು ಎನ್.ಎಂ.ಡಿ.ಎಫ್.ಸಿ.ಯ ಮೈಕ್ರೋ ಫೈನಾನ್ಸ್ ಯೋಜನೆಯಡಿಯಲ್ಲಿ ಸಾಲಸೌಲಭ್ಯವನ್ನು ನೀಡುತ್ತದೆ. ಆದರೆ, ಈ ಯೋಜನೆಯಡಿ ಸಹಾಯಧನ ಸೌಲಭ್ಯ ಇರುವುದಿಲ್ಲ. ಆರ್ಥಿಕ ಮಿತವ್ಯಯವನ್ನು (thrift) ಗುರಿಯಾಗಿಟ್ಟುಕೊಂಡಿರುವ ಮತ್ತು ಉತ್ತಮ ಹಣಕಾಸಿನ ವ್ಯವಹಾರ ನಡೆಸುತ್ತಿರುವ ಹಾಗೂ ನೋಂದಾಯಿತ ಸ್ವ-ಸಹಾಯ ಸಂಘಗಳಲ್ಲಿ ಸದಸ್ಯತ್ವ ಪಡೆದಿರುವ ಪ್ರತಿ ಸದಸ್ಯರಿಗೆ ನಿಗಮದಿಂದ ರೂ.1.00 ಲಕ್ಷದವರೆಗೆ ಸಾಲಸೌಲಭ್ಯ ನೀಡಲಾಗುತ್ತದೆ.

ಕ್ರೆಡಿಟ್ ಲೈನ್-1ರ ನಿಯಮಾವಳಿಯನ್ವಯ ಪ್ರತಿ ಸದಸ್ಯರಿಗೆ ಸಾಲಿಯಾನ ಶೇ.7ರ ಬಡ್ಡಿ ದರದಲ್ಲಿ ಮತ್ತು ಕ್ರೆಡಿಟ್ ಲೈನ್-2ರ ನಿಯಮಾವಳಿಯನ್ವಯ ಪ್ರತಿ ಪುರುಷ ಸದಸ್ಯರಿಗೆ ಸಾಲಿಯಾನ ಶೇ.10ರ ಬಡ್ಡಿ ದರದಲ್ಲಿ ಮತ್ತು ಮಹಿಳಾ ಸದಸ್ಯರಿಗೆ ಶೇ.8ರ ಬಡ್ಡಿ ದರದಲ್ಲಿ ರೂ.1.50 ಲಕ್ಷದವರೆಗೆ ಸಾಲಸೌಲಭ್ಯವನ್ನು ನೀಡಲಾಗುತ್ತದೆ.ಫಲಾನುಭವಿಯು ತಾನು ಪಡೆದ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗುತ್ತದೆ.ಒಟ್ಟಿನಲ್ಲಿ, ಈ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ನಗರ ಪ್ರದೇಶಗಳಲ್ಲಿನಕೊಳಗೇರಿಯಲ್ಲಿಚದುರಿ ಹೋಗಿರುವ (scattered) ಹಾಗೂ ಬ್ಯಾಂಕ್ ಸಾಲ ಸೌಲಭ್ಯದಿಂದ ವಂಚಿತರಾಗಿರುವ ಅಲ್ಪಸಂಖ್ಯಾತ ಸಮುದಾಯಗಳ ಮಹಿಳೆಯರಿಗೆ ರಿಯಾಯಿತಿ ದರದಲ್ಲಿ ಸಾಲಸೌಲಭ್ಯವನ್ನು ನೀಡಲಾಗುತ್ತದೆ.

## ವಿದ್ಯಾಭ್ಯಾಸ ಸಾಲ ಯೋಜನೆ

ಸದರಿ ಯೋಜನೆಯಡಿ ಕ್ರೆಡಿಟ್ ಲೈನ್-1ರ ನಿಯಮಾವಳಿಯನ್ವಯ ಅಲ್ಪಸಂಖ್ಯಾತ ಸಮುದಾಯಗಳ ವಿದ್ಯಾರ್ಥಿಗಳಿಗೆ 05 ವರ್ಷಗಳ ವೃತ್ತಿಪರ ಮತ್ತು ತಾಂತ್ರಿಕ ವ್ಯಾಸಂಗಕ್ಕಾಗಿಸಾಲಿಯಾನ ಶೇ.3ರ ಬಡ್ಡಿ ದರದಲ್ಲಿ ರೂ.15.00 ಲಕ್ಷಗಳವರೆಗೆ (ವಿದೇಶ ವ್ಯಾಸಂಗಕ್ಕಾಗಿ ರೂ.20.00 ಲಕ್ಷಗಳವರೆಗೆ) ಮತ್ತು ಕ್ರೆಡಿಟ್ ಲೈನ್-2ರ ನಿಯಮಾವಳಿಯನ್ವಯ ಪುರುಷ ವಿದ್ಯಾರ್ಥಿಗೆ ಸಾಲಿಯಾನ ಶೇ.8ರ ಬಡ್ಡಿ ದರದಲ್ಲಿ ಮತ್ತು ಮಹಿಳಾ ವಿದ್ಯಾರ್ಥಿಗೆ ಶೇ.5ರ ಬಡ್ಡಿ ದರದಲ್ಲಿ ರೂ.20.00 ಲಕ್ಷಗಳವರೆಗೆ (ವಿದೇಶ ವ್ಯಾಸಂಗಕ್ಕಾಗಿ ರೂ.30.00 ಲಕ್ಷಗಳವರೆಗೆ) ಸಾಲಸೌಲಭ್ಯ ನೀಡಲಾಗುತ್ತದೆ.

ಎನ್.ಎಂ.ಡಿ.ಎಫ್.ಸಿ.ಯು ಅಲ್ಪಸಂಖ್ಯಾತ ಸಮುದಾಯಗಳ ಅರ್ಹ ವಿದ್ಯಾರ್ಥಿಗಳಿಗೆ ವೃತ್ತಿ ಆಧಾರಿತ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಸಾಲಸೌಲಭ್ಯ ನೀಡುವ ಉದ್ದೇಶವನ್ನುಹೊಂದಿರುತ್ತದೆ. ವಿದ್ಯಾರ್ಥಿಗಳು ತಾವು ಪಡೆದ ಸಾಲವನ್ನು ಅವರ ವ್ಯಾಸಂಗ ಪೂರ್ಣಗೊಂಡ ನಂತರ 05 ವರ್ಷಗಳ ಅವಧಿಯಲ್ಲಿ ಮರುಪಾವತಿ ಮಾಡಬೇಕಾಗುತ್ತದೆ.

## ಸಾಂಪ್ರದಾಯಿಕ ಕುಶಲಕರ್ಮಿಗಳು/ಕರಕುಶಲ ವಸ್ತುಗಳ ತಯಾರಕರಿಗೆ "ವಿರಾಸತ್" ಯೋಜನೆ ("Virasat"-A Credit Scheme for artisans/craft persons)

ಸದರಿ ಯೋಜನೆಯು ಹೊಸ ಯೋಜನೆಯಾಗಿದ್ದು, ಈ ಯೋಜನೆಯಡಿಯಲ್ಲಿ, ಪುರುಷ ಕುಶಲಕರ್ಮಿಗಳು/ಕರಕುಶಲ ವಸ್ತುಗಳ ತಯಾರಕರು ಸಾಲಿಯಾನ ಶೇ.5ರ ಬಡ್ಡಿ ದರದಲ್ಲಿ ಮತ್ತು ಮಹಿಳಾ ಕುಶಲಕರ್ಮಿಗಳು/ಕರಕುಶಲ ವಸ್ತುಗಳ ತಯಾರಕರು ಶೇ.4ರ ಬಡ್ಡಿ ದರದಲ್ಲಿ ಗರಿಷ್ಠ ರೂ.10.00 ಲಕ್ಷಗಳ ಸಾಲವನ್ನು ಪಡೆಯಬಹುದಾಗಿದೆ. ಅಲ್ಲದೆ ಮಹಿಳೆಯರಿಗೆ ಶೇ.1ರ ಡಿಸ್ಕೌಂಟ್ ಸಹ ಇರುತ್ತದೆ.ಸದರಿ ಯೋಜನೆಯಡಿಯಲ್ಲಿ ಪ್ರಮುಖವಾಗಿ ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತರಿಗೆ ನಿರಂತರ ಉದ್ಯೋಗ ಹೊಂದುವ ಅವಕಾಶವಿರುತ್ತದೆ.

ಕೇಂದ್ರ ಸರ್ಕಾರದ ಅಲ್ಪಸಂಖ್ಯಾತರ ವ್ಯವಹಾರಗಳಸಚಿವಾಲಯದಆಶ್ರಯದಲ್ಲಿ ನಡೆಯುವ ಉಸ್ತಾದ್ ಯೋಜನೆಯಡಿ ಎನ್.ಎಂ.ಡಿ.ಎಫ್.ಸಿ.ಯು ನಡೆಸುವ ಹ್ಯೂನಾರ್ ಹಾತ್ ವಸ್ತುಪ್ರದರ್ಶನದಲ್ಲಿ ಫಲಾನುಭವಿಗಳು ಭಾಗವಹಿಸಿ, ಅವರು ತಯಾರಿಸಿದ ಕರಕುಶಲ ವಸ್ತುಗಳನ್ನು ಮಾರಾಟ ಮಾಡಲು/ಮಾರಾಟ ಆದೇಶ (Supply Order) ಪಡೆಯಲು ಅನುಕೂಲವಾಗುತ್ತದೆ. ಸದರಿ ಕುಶಲಕರ್ಮಿಗಳು/ಕರಕುಶಲ ವಸ್ತುಗಳ ತಯಾರಕರು ಅವರಿಗೆ ಬೇಕಾದ ಕಚ್ಚಾವಸ್ತುಗಳು/ಟೂಲ್ಸ್‌ಗಳು/ಯಂತ್ರೋಪಕರಣಗಳನ್ನು ಖರೀದಿಸಲು ಅಗತ್ಯವಿರುವ ದುಡಿಯುವ ಬಂಡವಾಳ ಮತ್ತು ಸ್ಥಿರ ಬಂಡವಾಳ ಹೊಂದುವುದಕ್ಕಾಗಿ ಸಾಲವನ್ನು ಪಡೆಯಬಹುದಾಗಿರುತ್ತದೆ.

ಒಟ್ಟು ಸಾಲದಲ್ಲಿಎನ್.ಎಂ.ಡಿ.ಎಫ್.ಸಿ.ಯ ಪಾಲು ಶೇ.90, ಕೆ.ಎಂ.ಡಿ.ಸಿ.ಯ ಪಾಲು ಶೇ.5 ಆಗಿದ್ದು, ಇನ್ನುಳಿದ ಶೇ.5ರಷ್ಟು ವಂತಿಕೆಯನ್ನು ಫಲಾನುಭವಿಯು ಭರಿಸಬೇಕಾಗುತ್ತದೆ.ಫಲಾನುಭವಿಗಳಿಗೆಸಾಲ ಪಡೆದು ಘಟಕವನ್ನುಸ್ಥಾಪಿಸಿಕೊಳ್ಳಲು06 ತಿಂಗಳುಗಳ ಕಾಲಾವಕಾಶ (moratorium period) ದೊರೆಯುತ್ತದೆ.ನಂತರ, ಮುಂದಿನ ತ್ರೈಮಾಸಿಕ ತಿಂಗಳಿನಿಂದ ಪ್ರಾರಂಭಿಸಿ ಮೂರು ತಿಂಗಳಿಗೊಮ್ಮೆ ಮತ್ತು 05 ವರ್ಷಗಳ ಅವಧಿಯೊಳಗೆ ಫಲಾನುಭವಿಗಳು ಸಾಲವನ್ನು ಮರುಪಾವತಿ (quarterly repayment)

ಮಾಡಬೇಕಾಗುತ್ತದೆ. ಹೀಗಿದ್ದರೂ, ಫಲಾನುಭವಿಗಳು 06 ತಿಂಗಳುಗಳ ಕಾಲಾವಕಾಶದಅವಧಿಗೂ (moratorium period) ಮತ್ತು ಮೊದಲ ಕಂತಿನಅಸಲಿನಮರುಪಾವತಿಗೂ ಬಡ್ಡಿಯನ್ನು ಪಾವತಿಬೇಕಾಗುತ್ತದೆ.

ಸದರಿ ಯೋಜನೆಯಡಿ ಸಾಲ ಪಡೆಯುವ ಫಲಾನುಭವಿಗಳಿಯ ಮರಣ ಮತ್ತು ಅಂಗವಿಕಲತೆ ಸಂಬಂಧದಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ವಿಮಾ ಕಂಪೆನಿಯ ಸಹಯೋಗದೊಂದಿಗೆ ಸಾಲದ ಅವಧಿಗೆ ವಿಮೆ ಪಡೆಯಲಾಗುತ್ತದೆ.

**ಅರ್ಜಿದಾರು ಸಲ್ಲಿಸಬೇಕಾದ ದಾಖಲೆಗಳು**

- ನಿಗದಿತ ನಮೂನೆಯಲ್ಲಿ ಅರ್ಜಿ (ಆನ್ಲೈನ್ ಅರ್ಜಿ)
- ಅರ್ಜಿದಾರರ ಇತ್ತೀಚಿನ ಎರಡು ಪಾಸ್ ಪೋರ್ಟ್ ಅಳತೆಯ ಭಾವ ಚಿತ್ರ
- ಜಾತಿ ಮತ್ತು ಆದಾಯ ಪ್ರಮಾಣ ಪತ್ರ
- ಆಧಾರ್ ಕಾರ್ಡ್‌ನ ಪ್ರತಿ
- ಪಡಿತರ ಚೀಟಿ/ಮತದಾರರ ಚಿಠಿಯ ಪ್ರತಿ
- ಯೋಜನಾ ವರದಿ
- ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರು ಕೇಂದ್ರ/ರಾಜ್ಯ ಸರ್ಕಾರದ ಸೇವೇಯಲ್ಲಿ ಇಲ್ಲದಿರುವ ಬಗ್ಗೆ ರೂ.50/- ಛಾಪಾ ಕಾಗದದಲ್ಲಿನ ದೃಡಿಕರಣ ಪತ್ರ
- ಕೆ.ಎಂ.ಡಿ.ಸಿ ನಿಗಮದಿಂದ ಈ ಹಿಂದೆ ಯಾವುದೇ ಸಾಲ ಸೌಲಭ್ಯವನ್ನು ಪಡೆದಿಲ್ಲದಿರುವುದರ ಬಗ್ಗೆ ರೂ.50/- ಛಾಪಾ ಕಾಗದದಲ್ಲಿನ ದೃಡಿಕರಣ ಪತ್ರ.
- ಉಳಿದ್ದಂತೆ ಆಯಾ ಯೋಜನೆಗಳಿಗೆ ಸಂಬಂದಿಸಿದಂತೆ ಸರ್ಕಾರಿ ಅದೇಶದ ಅನ್ವಯ ಷರತ್ತುಗಳಪಟ್ಟು ಮಂಜುರಾತಿ ನೀಡಲಾಗುವುದು.

ಅನುಬಂಧ-3

# ಅನುಬಂಧ - 3

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ 535 (ಆ)ಕ್ಕೆ ಉತ್ತರ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಹಾಸನ ಜಿಲ್ಲೆ, ಹಾಸನ.

2017-18ನೇ ಸಾಲಿನ ವಿವಿಧ ಯೋಜನೆಯ ಯೋಜನಾವಾರು ಅನುದಾನ ಹಾಗೂ ವೆಚ್ಚದ ವಿವರ

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆಯ ಹೆಸರು | ಅನುದಾನ | | ವೆಚ್ಚ | |
|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ಯೋಜನೆ | 56 | 42.70 | 88 | 65.90 |
| 2 | ಅರಿವು ಸಾಲ ಯೋಜನೆ | 371 | – | 224 | 88.93 |
| 3 | ಶ್ರಮಶಕ್ತಿ ಸಾಲ ಯೋಜನೆ | 113 | 56.50 | 145 | 56.50 |
| 4 | ಮೈಕ್ರೋಕ್ರೆಡಿಟ್ ಸಾಲ ಯೋಜನೆ | 338 | 33.80 | 341 | 34.10 |
| 5 | ಗಂಗಾಕಲ್ಯಾಣ ಯೋಜನೆ | 35 | 70.00 | 35 | 70.00 |
| 6 | ಪಶುಸಂಗೋಪನಾ ಸಾಲ ಯೋಜನೆ | 35 | 14.09 | 33 | 13.20 |
| 7 | ಪ್ರವಾಸಿ ನೇರಸಾಲ ಯೋಜನೆ (ಕೇರಳ ಮಾದರಿ) | 01 | 10.00 | – | – |
| 8 | ಅಲ್ಪಸಂಖ್ಯಾತರ ಟ್ಯಾಕ್ಸಿ ಕಲ್ಯಾಣ ಯೋಜನೆ | 07 | 21.00 | 06 | 18.00 |
| 9 | ಆಟೋಮೊಬೈಲ್ ಸರ್ವಿಸ್ ತರಬೇತಿ ಹಾಗೂ ಸಾಲ ಯೋಜನೆ | 03 | 3.75 | 03 | 3.75 |
| 10 | ಅಲ್ಪಸಂಖ್ಯಾತರ ರೈತರ ಕಲ್ಯಾಣ ಯೋಜನೆ | 19 | 19.00 | 14 | 14.00 |
| | ಒಟ್ಟು | 979 | 280.84 | 889 | 364.38 |

## ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯ ಗುರಿ ಸಾಧನೆ

| ಕ್ರ. ಸಂ. | ಯೋಜನೆಯ ಹೆಸರು | ಅನುದಾನ | | ವೆಚ್ಚ | |
|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ಯೋಜನೆ | 13 | 7.15 | 12 | 11.36 |
| 2 | ಅರಿವು ಸಾಲ ಯೋಜನೆ | 34 | 13.60 | 27 | 11.99 |
| 3 | ಶ್ರಮಶಕ್ತಿ ಸಾಲ ಯೋಜನೆ | 65 | 32.50 | 65 | 32.50 |
| 4 | ಮೈಕ್ರೋಕ್ರೆಡಿಟ್ ಸಾಲ ಯೋಜನೆ | 65 | 6.50 | 30 | 3.00 |
| 5 | ಗಂಗಾಕಲ್ಯಾಣ ಯೋಜನೆ | 10 | 20.00 | 09 | 18.00 |
| 6 | ಪಶುಸಂಗೋಪನಾ ಯೋಜನೆ | 13 | 5.20 | 11 | 4.40 |
| 7 | ಅಲ್ಪಸಂಖ್ಯಾತರ ಟ್ಯಾಕ್ಸಿ ಕಲ್ಯಾಣ ಯೋಜನೆ | 03 | 9.00 | 03 | 9.00 |
| | ಒಟ್ಟು | 203 | 93.95 | 157 | 90.25 |
| | ಒಟ್ಟು 1+2 | 1182 | 374.79 | 1046 | 454.63 |

ಜಿಲ್ಲಾ ವ್ಯವಸ್ಥಾಪಕರು,
ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿ.
ಹಾಸನ ಜಿಲ್ಲೆ

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ 535 (ಅ)ಕ್ಕೆ ಉತ್ತರ

## ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಹಾಸನ ಜಿಲ್ಲೆ, ಹಾಸನ.

2018–19ನೇ ಸಾಲಿನ ವಿವಿಧ ಯೋಜನೆಯ ಯೋಜನಾವಾರು ಅನುದಾನ ಹಾಗೂ ವೆಚ್ಚದ ವಿವರ

| ಕ್ರ. ಸಂ. | ಯೋಜನೆಯ ಹೆಸರು | ಅನುದಾನ | | ವೆಚ್ಚ | |
|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1. | ಸ್ವಯಂ ಉದ್ಯೋಗ ಯೋಜನೆ | 51 | 44.99 | 51 | 44.82 |
| 2 | ಅರಿವು ಸಾಲ ಯೋಜನೆ | 356 | 136.56 | 222 | 85.46 |
| 3 | ಶ್ರಮಶಕ್ತಿ ಸಾಲ ಯೋಜನೆ | 65 | 32.50 | 119 | 32.50 |
| 4 | ಮೈಕ್ರೋಕ್ರೆಡಿಟ್ ಸಾಲ ಯೋಜನೆ | 141 | 14.10 | 135 | 13.50 |
| 5 | ಗಂಗಾ ಕಲ್ಯಾಣ ಯೋಜನೆ | 35 | 70.00 | 35 | 70.00 |
| 6 | ಪಶು ಸಂಗೋಪನಾ ಸಾಲ ಯೋಜನೆ | 35 | 14.00 | 35 | 14.00 |
| 7 | ಅಲ್ಪಸಂಖ್ಯಾತರ ಟ್ಯಾಕ್ಸಿ ಕಲ್ಯಾಣ ಯೋಜನೆ | 09 | 27.00 | 09 | 27.00 |
| 8 | ಅರಿವು ನೇರಸಾಲ ಯೋಜನೆ | 01 | 6.00 | 02 | 10.00 |
| 9 | ಅಲ್ಪಸಂಖ್ಯಾತರ ರೈತರ ಕಲ್ಯಾಣ ಯೋಜನೆ | 07 | 7.00 | 06 | 6.00 |
| 10 | ಆಟೋಮೊಬೈಲ್ ಸರ್ವಿಸ್ ತರಬೇತಿ ಹಾಗೂ ಸಾಲ ಯೋಜನೆ | 02 | 2.50 | – | – |
| 11 | ವೃತ್ತಿ ಪ್ರೋತ್ಸಾಹ ಯೋಜನೆ | 42 | 42.00 | 38 | 38.00 |
| 12 | ಮನೆ ಮಳಿಗೆ ಯೋಜನೆ | 01 | 5.00 | – | – |
| | ಒಟ್ಟು: | 745 | 401.65 | 652 | 341.28 |

ಜಿಲ್ಲಾ ವ್ಯವಸ್ಥಾಪಕರು,
ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿ.

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ 535 (ಆ)ಕ್ಕೆ ಉತ್ತರ

**ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಹಾಸನ ಜಿಲ್ಲೆ, ಹಾಸನ.**

2019–20ನೇ ಸಾಲಿನ ವಿವಿಧ ಯೋಜನೆಯ ಯೋಜನಾವಾರು ಅನುದಾನ ಹಾಗೂ ವೆಚ್ಚದ ವಿವರ

| ಕ್ರ. ಸಂ. | ಯೋಜನೆಯ ಹೆಸರು | ಗುರಿ (ಅನುದಾನ) | | ಆಯ್ಕೆ ಸಮಿತಿ ಅನುಮೋದನೆ | | ಪರಿಷ್ಕೃತ ಗುರಿ (ಅನುದಾನ) | | ಕೇಂದ್ರ ಕಛೇರಿ ಯಿಂದ ಬಿಡುಗಡೆ (ವೆಚ್ಚ) | | ಕೇಂದ್ರ ಕಛೇರಿಯಲ್ಲಿ ಬಾಕಿ | |
|---|---|---|---|---|---|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1. | ಸ್ವಯಂ ಉದ್ಯೋಗ ಯೋಜನೆ | 28 | 21.09 | 28 | 30.09 | 14 | 10.55 | 08 | 6.07 | 06 | 4.48 |
| 2 | ಅರಿವು ಸಾಲ ಯೋಜನೆ | 385 | 157.03 | 202 | 92.58 | 287 | 117.77 | 177 | 83.34 | 25 | 9.24 |
| 3 | ಶ್ರಮಶಕ್ತಿ ಸಾಲ ಯೋಜನೆ | 47 | 23.50 | 80 | 23.50 | 30 | 15.00 | 57 | 15.00 | – | – |
| 4 | ಮೈಕ್ರೋಕ್ರೆಡಿಟ್ ಸಾಲ ಯೋಜನೆ | 70 | 7.00 | 70 | 7.00 | 44 | 4.40 | 44 | 4.40 | – | – |
| 5 | ಗಂಗಾಕಲ್ಯಾಣ ಯೋಜನೆ | 27 | 54.00 | 27 | 54.00 | 14 | 28.00 | – | – | 14 | 28.00 |
| 6 | ಪಶುಸಂಗೋಪನಾ ಸಾಲ ಯೋಜನೆ | 33 | 13.20 | 33 | 13.20 | 22 | 8.80 | 33 | 13.20 | – | – |
| 7. | ಅಲ್ಪಸಂಖ್ಯಾತರ ಟ್ಯಾಕ್ಸಿ ಕಲ್ಯಾಣ ಯೋಜನೆ | 04 | 12.00 | 04 | 12.00 | 02 | 6.00 | 02 | 6.00 | – | – |
| 8 | ವೃತ್ತಿ ಪ್ರೋತ್ಸಾಹ ಯೋಜನೆ | 09 | 9.00 | 09 | 9.00 | 05 | 4.72 | 05 | 5.00 | – | – |
| 9 | ಅಲ್ಪಸಂಖ್ಯಾತರ ರೈತರ ಕಲ್ಯಾಣ ಯೋಜನೆ | 03 | 3.00 | 04 | 4.00 | 02 | 2.00 | – | – | 02 | 2.00 |
| 10 | ಆಟೋಮೊಬೈಲ್ ಸರ್ವಿಸ್ ತರಬೇತಿ ಹಾಗೂ ಸಾಲ ಯೋಜನೆ | 01 | 1.25 | 01 | 1.25 | 01 | 1.25 | – | – | 01 | 1.25 |
| 11 | ಗೃಹ ನಿರ್ಮಾಣ ಮಾರ್ಜಿನ್ ಸಾಲ ಯೋಜನೆ | 15 | 15.00 | – | – | 12 | 12.00 | – | – | – | – |
| | ಒಟ್ಟು: | 622 | 316.07 | 458 | 246.62 | 433 | 210.49 | 326 | 133.01 | 48 | 44.97 |

ಜಿಲ್ಲಾ ವ್ಯವಸ್ಥಾಪಕರು,
ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿ.,
ಹಾಸನ ಜಿಲ್ಲೆ